# ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –269 | ಆರ್‌ಎನ್ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:19–05–2025 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 269 | RNI No: KARKAN/2023/88462 | KA/SK/CTA-874/2024-2026 | Chitradurga | Date: 19-05-2025 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು
ಹಸಿವು ಮುಕ್ತ ಕರ್ನಾಟಕ: ಉತ್ತಮ ನಡೆ 2
ತುರ್ತು ಪರಿಸ್ಥಿತಿ ನಿರ್ವಹಣೆ, ರಕ್ಷಣಾ ಕಾರ್ಯಾಚರಣೆಯ ಅಣುಕು ಪ್ರದರ್ಶನ 3
ಶ್ರೀ.ಎಚ್.ಡಿ.ದೇವೇಗೌಡ 93, ನಾಟ್ ಔಟ್ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಚಿತ್ರದುರ್ಗ ಜಿಲ್ಲೆಯಲ್ಲಿ 22.7 ಮಿ.ಮೀ ಮಳೆ

» ಚಿತ್ರದುರ್ಗ

ಶನಿವಾರ ರಾತ್ರಿ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಸರಾಸರಿ 22.7 ಮಿ.ಮೀ ಮಳೆಯಾಗಿದೆ. ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ 29.9 ಮಿ.ಮೀ, ಚಿತ್ರದುರ್ಗ ತಾಲ್ಲೂಕಿನಲ್ಲಿ 20.9 ಹಿರಿಯೂರು ತಾಲ್ಲೂಕು 5.6 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 23.3 ಮಿ.ಮೀ, ಹೊಸದುರ್ಗ ತಾಲ್ಲೂಕಿನಲ್ಲಿ 35.1 ಮಿ.ಮೀ ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 20.3 ಮಿ.ಮೀ ಮಳೆಯಾಗಿದೆ. ಹೋಬಳಿವಾರು ಮಳೆ ವಿವರ: ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 19.8 ಮಿ.ಮೀ, ನಾಯಕನಹಟ್ಟಿ 36.7 ಮಿ.ಮೀ, ಪರಶುರಾಂಪುರ 17.2 ಮಿ.ಮೀ, ತಳಕು 32.3 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 19.6 ಮಿ.ಮೀ, ಭರಮಸಾಗರ 19.9 ಮಿ.ಮೀ, ಹಿರೇಗುಂಟನೂರು 25.6 ಮಿ.ಮೀ, ತುರುವನೂರು 28.4 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರು 7.1 ಮಿ.ಮೀ, ಐಮಂಗಲ 8.1 ಮಿ.ಮೀ, ಧರ್ಮಪುರ 5.3 ಮಿ.ಮೀ, ಜವನಗೊಂಡನಹಳ್ಳಿ 16.8 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 26.5 ಮಿ.ಮೀ, ಬಿ.ದುರ್ಗ 19.8 ಮಿ.ಮೀ, ರಾಮಗಿರಿ 20.1 ಮಿ.ಮೀ, ತಾಳ್ಯ 22.9 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 28.8 ಮಿ.ಮೀ, ಮಾಡದಕೆರೆ 19.7 ಮಿ.ಮೀ, ಮತ್ತೋಡು 34.9 ಮಿ.ಮೀ, ಶ್ರೀರಾಂಪುರ 40 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನ ಮೊಳಕಾಲ್ಮೂರಿನಲ್ಲಿ 19.8 ಮಿ.ಮೀ ಹಾಗೂ ದೇವಸಮುದ್ರದಲ್ಲಿ 19.8 ಮಿ.ಮೀ ಮಳೆಯಾಗಿದೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

### ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಹೆಚ್.ಎ.ಎಲ್‌ನಲ್ಲಿ ಫಿಟ್ಟರ್, ಮೆಷಿನಿಸ್ಟ್, ಟರ್ನರ್, ಎಲೆಕ್ಟ್ರಿಷಿಯನ್, ವೆಲ್ಡರ್, ಕಂಪ್ಯೂಟರ್ ಅಪರೇಟರ್ ಅಂಡ್ ಪ್ರೋಗ್ರಾಮಿಂಗ್ ಅಸಿಸ್ಟಟ್, ಕಾರ್ಪೆಂಟರ್, ಫೌಂಡ್ರಿ ಮ್ಯಾನ್, ಶೀಟ್ ಮೆಟಲ್ ವರ್ಕರ್, ಟೂಲ್ ಅಂಡ್ ಡೈ ಮಾರ್ಕರ್, ಸಿಎನ್‌ಸಿ ಪ್ರೋಗ್ರಾಮರ್ ಕಮ್ ಅಪರೇಟರ್ ಮೆಕಾನಿಕ್ ರಿಫ್ರೀರಿಗೇಷನ್ ಅಂಡ್ ಕಂಡಿಷಿನಿಂಗ್ ಟ್ರೇಡ್‌ಗಳಿಗೆ ಸಂಬಂಧಪಟ್ಟ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಜೂನ್ 05 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಈ ಅಪ್ರೆಂಟಿಸ್ ತರಬೇತಿಯು ಎಲ್ಲಾ ಟ್ರೇಡ್‌ಗಳಿಗೂ ಒಂದು ವರ್ಷದ ಅವಧಿಯಾಗಿರುತ್ತದೆ. ಅಭ್ಯರ್ಥಿಗಳು ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ಐ.ಟಿ.ಐ ಪ್ರಮಾಣ ಪತ್ರ (ಸ್ವ ದೃಢೀಕೃತ ರಿಸಲ್ಟ್ ಶೀಟ್), ಜಾತಿ ಪ್ರಮಾಣ ಪತ್ರ, ಅಂಗವಿಕಲರ ಪ್ರಮಾಣ ಪತ್ರ, ಆರ್ಮಡ್ ಪರ್ಸನಲ್ ಪ್ರಮಾಣ ಪತ್ರ, ಆಧಾರ್ ಕಾರ್ಡ್, 4 ಭಾವಚಿತ್ರ., ಎನ್‌ಸಿವಿಟಿ ನೋಂದಣಿ ಪ್ರತಿ ಅರ್ಜಿಯೊಂದಿಗೆ ಸಲ್ಲಿಸಬೇಕು. ಆನ್‌ಲೈನ್‌ನಲ್ಲಿ ನೊಂದಾಯಿಸಲು https://apprenticeshindia.gov.in, www.hal-india.com/career ವೆಬ್‌ಸೈಟ್ ಮೂಲಕ ಅಥವಾ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ದೂರವಾಣಿ ಸಂಖ್ಯೆ 9945587060, 7022459064 ಗೆ ಸಂಪರ್ಕಿಸಬಹುದು.

### ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

» ಚಿತ್ರದುರ್ಗ

2025–26ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಮೇ.16 ರಿಂದ ಅರ್ಜಿ ಸಲ್ಲಿಕೆ ಈಗಾಗಲೇ ಪ್ರಾರಂಭವಾಗಿದ್ದು, ಜೂನ್ 16 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಜೂನ್ 20ರಂದು ಹೊಸ ಅರ್ಜಿಗಳನ್ನು ತಾಲ್ಲೂಕು ಕಲ್ಯಾಣ ಅಧಿಕಾರಿಗಳು ಪರಿಶೀಲನೆ ನಡೆಸುವರು. ಜೂನ್ 23ರಂದು ತಾಲ್ಲೂಕು ಸಮಿತಿಯ ಮೂಲಕ ಆಯ್ಕೆಯಾದ ಹೊಸ ವಿದ್ಯಾರ್ಥಿಗಳ ಆಯ್ಕೆ ಪಟ್ಟಿ ಪ್ರಕಟಿಸಲಾಗುವುದು. ಆಯ್ಕೆಯಾದ ವಿದ್ಯಾರ್ಥಿಗಳು ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಪಡೆಯಲು ಜೂನ್ 30 ಕೊನೆಯ ದಿನವಾಗಿದೆ.

### ಸಭೆಯಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಸೂಚನೆ

# ದಾಖಲೆರಹಿತ ಜನ ವಸತಿ ಪ್ರದೇಶಗಳಿಗೆ ಹಕ್ಕುಪತ್ರ ನೀಡಿ, ಸಮಾಜದ ಮುಖ್ಯವಾಹಿನಿಗೆ ತನ್ನಿ

» ಚಿತ್ರದುರ್ಗ

ದಾಖಲೆ ರಹಿತ ಜನ ವಸತಿ ಪ್ರದೇಶಗಳಿಗೆ ಅಗತ್ಯವಿರುವ ಮೂಲಭೂತ ಸೌಕರ್ಯ ಒದಗಿಸಲು ಹಾಗೂ ಅವುಗಳಿಗೆ ಕಾನೂನು ರೀತ್ಯಾ ಸ್ಥಾನಮಾನ ಕಲ್ಪಿಸಲು ಮತ್ತು ಅಲ್ಲಿ ನಿರ್ಮಿಸಿಕೊಂಡಿರುವ ವಸತಿಗಳಿಗೆ 94ಸಿ ನಿಯಮದಡಿ ಹಕ್ಕುಪತ್ರ ನೀಡಿ ಸಮಾಜದ ಮುಖ್ಯವಾಹಿನಿಗೆ ತಂದು ಅವರನ್ನೂ ಅಭಿವೃದ್ಧಿ ಪಥದಲ್ಲಿ ಕೊಂಡೊಯ್ಯುವುದು ತುಂಬ ಅವಶ್ಯಕ ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಈಚೆಗೆ ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಲಂಬಾಣಿ ತಾಂಡ, ಗೊಲ್ಲರ ಹಟ್ಟಿ, ವಡ್ಡರಹಟ್ಟಿ,ಕುರುಬರಹಟ್ಟಿ,ನಾಯಕರಹಟ್ಟಿ, ಮಜರೆ ಗ್ರಾಮ, ಹಾಡಿ, ದೊಡ್ಡಿ, ಪಾಳ್ಯ ಮತ್ತು ಇತರೆ ದಾಖಲೆರಹಿತ ಜನವಸತಿ ಪ್ರದೇಶಗಳನ್ನು ಕಂದಾಯ ಗ್ರಾಮಗಳಾಗಿ ಪರಿವರ್ತಿಸುವ ಕುರಿತು ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.



ಚಿತ್ರದುರ್ಗ ತಾಲ್ಲೂಕಿನಲ್ಲಿ ನೆಲಸಿರುವ ಲಂಬಾಣಿ (ಬಂಜಾರ), ಗೊಲ್ಲ, ಭೋವಿ, ನಾಯಕ, ಇತರೆ ಪರಿಶಿಷ್ಟ ಜಾತಿಗಳೂ ಸೇರಿದಂತೆ ದುರ್ಬಲ ಸಮುದಾಯಗಳ ಜನರು ವಾಸಿಸುವ ಹಲವು ವಸತಿ ಪ್ರದೇಶಗಳು ಅರಣ್ಯ, ಬೆಟ್ಟ ಗುಡ್ಡದ ತಪ್ಪಲು, ಗ್ರಾಮಠಾಣಾ, ಹೊರ ಖಾಸಗಿ ಜಮೀನುಗಳಲ್ಲಿ, ಸರ್ಕಾರಿ ಗೋಮಾಳ, ಕಾವಲು ಇತ್ಯಾದಿ ಸ್ಥಳಗಳಲ್ಲಿ ನಿರ್ಮಾಣಗೊಂಡು ಹಲವಾರು ವರ್ಷಗಳಿಂದ ಅಸ್ಥಿತ್ವದಲ್ಲಿ ಇರುತ್ತವೆ. ಈ ಜನರು ಶತಮಾನಗಳಿಂದ ಇಂತಹ ಪ್ರದೇಶಗಳಲ್ಲಿ ಜನ ವಸತಿ ಮಾಡಿಕೊಂಡು ಸಮಾಜದ ಮುಖ್ಯವಾಹಿನಿಗೆ ಬಾರದೇ, ತಮ್ಮದೇ ಆದ ರೀತಿ ನೀತಿ, ಜೀವನಶೈಲಿ ರೂಢಿಸಿಕೊಂಡು ಬದುಕು ಸಾಗಿಸುತ್ತಾ ಬರುತ್ತಿದ್ದಾರೆ ಎಂದು ತಿಳಿಸಿದ ಅವರು, 10 ರಿಂದ 50 ವಸತಿ ಕುಟುಂಬಗಳಿದ್ದರೆ "ಉಪ ಗ್ರಾಮ" ಎಂದು, 50 ರಿಂದ 50ಕ್ಕೂ ಹೆಚ್ಚು ಮನೆ, ಕುಟುಂಬ ಅಥವಾ 250 ಜನರಿರುವ ಪ್ರದೇಶವನ್ನು "ಕಂದಾಯ ಗ್ರಾಮ" ಎಂದು ಘೋಷಿಸಬೇಕಿದೆ. ಹಾಗಾಗಿ, ತಾವು ತಮ್ಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಅಂತಹ ಪ್ರದೇಶಗಳನ್ನು ಗುರುತಿಸಿ ಸಮೀಕ್ಷೆ ನಡೆಸಿ ವರದಿ ನೀಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಕಂದಾಯ ಗ್ರಾಮದ ವಿಷಯವನ್ನು ಮುಂದಿನ ದಿನಗಳಲ್ಲಿ ಚರ್ಚಿಸುವುದಾಗಿ ತಿಳಿಸಿದರು.

ರಾಜ್ಯ ಸರ್ಕಾರವು ಎರಡು ವರ್ಷದ ಅವಧಿ ಪೂರೈಸುತ್ತಿರುವ ಸುಸಂದರ್ಭದಲ್ಲಿ ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ಇದೇ ಮೇ.20ರಂದು 1 ಲಕ್ಷ ಹಕ್ಕುಪತ್ರ ವಿತರಿಸುವ ಕಾರ್ಯಕ್ರಮ ಆಯೋಜಿಸಲಾಗಿದ್ದು, ಅದರ ಒಳಗಾಗಿ ಎಲ್ಲರಿಗೂ ಹಕ್ಕುಪತ್ರ ವಿತರಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ವೈ ರವಿಕುಮಾರ್, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಆರ್.ಶಿವಣ್ಣ, ತಾಲ್ಲೂಕು ಭೂ ದಾಖಲೆಗಳ ಸಹಾಯಕ ನಿರ್ದೇಶಕರು, ಭೂಮಾಪಕರು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಂದಾಯ ನಿರೀಕ್ಷಕರು, ಗ್ರಾಮ ಆಡಳಿತ ಅಧಿಕಾರಿಗಳು, ಸಮುದಾಯದ ಮುಖಂಡರು ಇದ್ದರು.

# ಹೊಸಪೇಟೆಯಲ್ಲಿ ಸಾಧನಾ ಸಮಾವೇಶ: ಕಂದಾಯ ಸಚಿವರಿಂದ ಪರಿಶೀಲನಾ ಸಭೆ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಭಾನುವಾರ ಕಂದಾಯ ಸಚಿವ ಕೃಷ್ಣಬೈರೇಗೌಡ ಅವರ ಅಧ್ಯಕ್ಷತೆಯಲ್ಲಿ ಮೇ.20ರಂದು ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ನಡೆಯಲಿರುವ ಸರ್ಕಾರದ ಎರಡು ವರ್ಷಗಳ ಸಾಧನಾ ಸಮಾವೇಶ ಕಾರ್ಯಕ್ರಮದ ಸಿದ್ಧತೆಗೆ ಸಂಬಂಧಿಸಿದಂತೆ ವಿಡಿಯೋ ಕಾನ್ಫರೆನ್ಸ್ ಮೂಲಕ ಚರ್ಚಿಸಲಾಯಿತು.

ಸಭೆಯ ಬಳಿಕ ಮಾತನಾಡಿದ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾತನಾಡಿ, ಹೊಸಪೇಟೆಯಲ್ಲಿ ನಡೆಯುವ ಸಾಧನಾ ಸಮಾವೇಶದಲ್ಲಿ ವಿವಿಧ ಸವಲತ್ತುಗಳ ವಿತರಣಾ ಕಾರ್ಯಕ್ರಮ ನಡೆಯಲಿದ್ದು, ಸಂಬಂಧಪಟ್ಟ ಅಧಿಕಾರಿಗಳು ಜಿಲ್ಲೆಯ ಫಲಾನುಭವಿಗಳನ್ನು ಕಾರ್ಯಕ್ರಮಕ್ಕೆ ಸಮರ್ಪಕವಾಗಿ ಕರೆದುಕೊಂಡು ಹೋಗಿ



ಬರುವಂತೆ ಸೂಕ್ತ ರೀತಿಯಲ್ಲಿ ವ್ಯವಸ್ಥೆ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಷಿ, ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ.ಕಾಳೇಸಿಂಘೆ ಸೇರಿದಂತೆ ತಹಶೀಲ್ದಾರ್‌ಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ಅನೈತಿಕ ಸಂಬಂಧಕ್ಕೆ ಕೊಲೆ; ಮಹಿಳೆ ಸೇರಿ ಮೂವರ ಬಂಧನ

» ಹೊಸದುರ್ಗ

ತಾಲ್ಲೂಕಿನ ಸಣ್ಣಕಿಟ್ಟದಹಳ್ಳಿಯಲ್ಲಿ ಇತೀಚೆಗೆ ನಡೆದ ವ್ಯಕ್ತಿಯೊಬ್ಬರ ಬರ್ಬರ ಕೊಲೆ ಪ್ರಕರಣಕ್ಕೆ ಸಂಬಂಧಿಸಿ ಮೂವರು ಆರೋಪಿಗಳನ್ನು ಹೊಸದುರ್ಗ ಠಾಣೆಯ ಪೊಲೀಸರು ಅರೆಸ್ಟ್ ಮಾಡಿದ್ದಾರೆ. ಸಣ್ಣಕಿಟ್ಟದಹಳ್ಳಿ ಗ್ರಾಮದ ಕೋಮಲ (25), ಗಿರೀಶ್ (26) ಹಾಗೂ ಮೂಡಲಗಿರಿಯಪ್ಪ (52) ಈ ಮೂವರು ಆರೋಪಿಗಳನ್ನು ಬಂಧನ ಮಾಡಲಾಗಿದೆ. ಅಕ್ರಮ ಸಂಬಂಧದ ವಿಚಾರವಾಗಿ ಚಿಕ್ಕಣ್ಣ ಎಂಬುವರನ್ನು ತಲೆಗೆ ಹೊಡೆದು, ಸೀರೆಯಿಂದ ಕುತ್ತಿಗೆಗೆ ಬಿಗಿದು ಕೊಲೆ ಮಾಡಿರುವುದಾಗಿ ಆರೋಪಿಗಳು ತಪ್ಪು ಒಪ್ಪಿಕೊಂಡಿದ್ದಾರೆ. ಮೇ 9 ರಂದು ಸಣ್ಣಕಿಟ್ಟದಹಳ್ಳಿ ಗ್ರಾಮದ ಪೂರ್ಣಿಮಾ ಅವರ ಪತಿ ಚಿಕ್ಕಣ್ಣ ಅವರನ್ನು ಕೊಲೆ ಮಾಡಿ, ಮೃತದೇಹವನ್ನು ತೋಟದಲ್ಲಿ ಎಸೆಯಲಾಗಿತ್ತು.ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಮಾರ್ಗದರ್ಶನದಲ್ಲಿ ಡಿವೈಎಸ್‌ಪಿ ಟಿ.ಎಂ. ಶಿವಕುಮಾರ್, ಹೊಸದುರ್ಗ ಠಾಣೆ ಪಿಐ ಕೆ.ಟಿ. ರಮೇಶ್, ಶ್ರೀರಾಂಪುರ ಠಾಣೆ ಪಿಐ ಮಧು, ಪಿಎಸ್‌ಐ ಮಹೇಶ್ ಕುಮಾರ್, ಭೀಮನಗೌಡ ಪಾಟೀಲ್, ಶ್ರೀಶೈಲ ಹಾಗೂ ಸಿಬ್ಬಂದಿಗಳು ಕಾರ್ಯಾಚರಣೆ ನಡೆಸಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

## ಪ್ರಮುಖ ಸುದ್ದಿ

### ಬೇಡಜಂಗಮರನ್ನು ಎಸ್ಸಿ ಪಟ್ಟಿಯಿಂದ ಕೈಬಿಡಬೇಕು– ಸ್ವತಂತ್ರ ಭಾರತದಲ್ಲಿ ಜಾತಿಗಣತಿ ಕಾರ್ಯ ರಾಜ್ಯದಲ್ಲಿಯೇ ಮೊದಲು

# ಸರಿದಾರಿಗೆ ಬಂದಿದೆ ಜಾತಿಗಣತಿ ಕಾರ್ಯ: ಹೆಚ್.ಆಂಜನೇಯ

» ಚಿತ್ರದುರ್ಗ ಹೊಯ್ಸಳ

ಚಿತ್ರದುರ್ಗ : ಒಳಮೀಸಲಾತಿ ಜಾರಿಗಾಗಿ 30 ವರ್ಷಗಳ ಹೋರಾಟ ಒಂದು ಭಾಗವಾಗಿದ್ದರೇ, ಈಗ ಜಾತಿಗಣತಿ ಸರ್ವೇ ಕಾರ್ಯದಲ್ಲಿ ಪಾಲ್ಗೊಳ್ಳುವುದು ಮತ್ತೊಂದು ಪ್ರಮುಖ ಭಾಗವಾಗಿದೆ ಎಂದು ಮಾಜಿ ಸಚಿವ ಹೆಚ್.ಆಂಜನೇಯ ಹೇಳಿದರು.

ನಗರದ ಪ್ರವಾಸಿ ಮಂದಿರದಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಒಳಮೀಸಲಾತಿ 3 ದಶಕದ ಹೋರಾಟಕ್ಕೆ ಸುಪ್ರೀಂ ಕೋರ್ಟ್ ತೀರ್ಪು ಬಲ ಕೊಟ್ಟಿದೆ. ಈಗಾಗಲೇ ಆಂಧ್ರ, ತೆಲಂಗಾಣ, ಹರಿಯಾಣದಲ್ಲಿ ಜಾರಿಗೊಳಿಸಲಾಗಿದೆ. ಅದೇ ರೀತಿ ರಾಜ್ಯದಲ್ಲಿಸಿದ್ದರಾಮಯ್ಯಮುಂದಾಗಿದ್ದಾರೆ ಎಂದರು.

ಹೊಲೆ–ಮಾದಿಗರು ರಾಜ್ಯದಲ್ಲಿ ಒಳಮೀಸಲಾತಿ ಜಾರಿಗೆ ಬಹುದೊಡ್ಡ ಅಡ್ಡಿ. ಈ ಎರಡು ಜಾತಿಯವರು ಕೆಲವು ಜಿಲ್ಲೆಗಳಲ್ಲಿ ಎಕೆ, ಎಡಿ, ಆದಿಆಂಧ್ರ ಎಂಬ ಒಂದೇ ಜಾತಿಸೂಚಕ ಹೆಸರಿನಲ್ಲಿ ಗುರುತಿಸಿಕೊಂಡು ಗೊಂದಲ ಮೂಡಿಸಿದ್ದಾರೆ. ಆದ್ದರಿಂದ ಒಳಮೀಸಲಾತಿ ತುರ್ತು ಜಾರಿಗೊಳಿಸಲು ಸಮಸ್ಯೆ ಆಗಿದ್ದು, ಅದನ್ನು ಸರಿಪಡಿಸಿ



ಎಸ್ಸಿಯಲ್ಲಿ 101 ಜಾತಿ ಜನರಿಗೆ ನ್ಯಾಯ ಒದಗಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂದಾಗಿದ್ದಾರೆ ಎಂದು ಹೇಳಿದರು.

ಸಾಮಾಜಿಕ ನ್ಯಾಯದ ಹರಿಕಾರ ಸಿದ್ದರಾಮಯ್ಯ, ಯಾವುದೇ ಜಾತಿಗೂ ಅನ್ಯಾಯ ಆಗದ ರೀತಿ ಸಮಬಾಳು, ಸಮಪಾಲು ತತ್ವದಡಿ ಪರಿಶಿಷ್ಟರಿಗೆ ಮೀಸಲಾತಿ ಹಂಚಿಕೆ ಮುಂದಾಗಿದ್ದು, ಸ್ವಾತಂತ್ರ ಭಾರತದಲ್ಲಿ ಪ್ರಥಮ ಬಾರಿಗೆ ಜಾತಿಗಣತಿ ಸರ್ವೇ ಮೂಲಕ ಸಾಹದ ಕಾರ್ಯಕ್ಕೆ ಕೈ ಹಾಕಿದ್ದು, ಇದಕ್ಕೆ ನಾವೆಲ್ಲರೂ ಬೆಂಬಲವಾಗಿ ನಿಲ್ಲಬೇಕಿದೆ ಎಂದರು.

ಒಳಮೀಸಲಾತಿ ಜಾರಿ ಪೂರ್ವ ರಾಜ್ಯದಲ್ಲಿ ಜಾತಿಗಣತಿ ಕಾರ್ಯ ಮೇ 5ರಂದು ಆರಂಭಗೊಂಡಿದ್ದು, ಅದರ ದಿನಾಂಕವನ್ನು ಮೇ 28ರ ವರೆಗೆ ವಿಸ್ತರಿಸಲಾಗಿದೆ. ಈ ಸರ್ವೇಯಲ್ಲಿ ಪರಿಶಿಷ್ಟ ಗುಂಪಿನಲ್ಲಿನ ಎಲ್ಲ ಜಾತಿ ಜನರು ಕಡ್ಡಾಯವಾಗಿ ಪಾಲ್ಗೊಂಡು, ತಮ್ಮ ಪಾಲಿನ ಮೀಸಲಾತಿ ಪಡೆಯಬೇಕು. ಈ ನಿಟ್ಟಿನಲ್ಲಿ ಈಗಾಗಲೇ ಮೀಸಲಾತಿ ಸೌಲಭ್ಯ ಉಂಡಿರುವ ನೌಕರ ವರ್ಗ ಸಮುದಾಯದಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಬೇಕು ಎಂದು ತಿಳಿಸಿದರು.

ಎಕೆ, ಎಡಿ, ಆದಿಆಂಧ್ರ ಯಾವುದೇ ಜಾತಿ ಸೂಚಕದಲ್ಲಿ ಗುರುತಿಸಿಕೊಂಡಿದ್ದರು ಕಡ್ಡಾಯವಾಗಿ 061–ಮಾದಿಗ ಎಂದು ಸ್ವಾಭಿಮಾನ, ಆತ್ಮಾಭಿಮಾನದಿಂದ ಹೇಳಬೇಕು. ಒಂದೊಮ್ಮೆ ಮೂಲ ಜಾತಿ ಬರೆಯಿಸದಿದ್ದರೇ ಎಲ್ಲ ಸೌಲಭ್ಯಗಳಿಂದಲೂ ಅಂತಹ ಕುಟುಂಬ ವಂಚಿತವಾಗಲಿದೆ. ಕಾರಣ ಪ್ರಸಕ್ತ ವರ್ಷದಲ್ಲಿಯೇ ಎಕೆ, ಎಡಿ, ಆದಿಆಂಧ್ರ ಪದವನ್ನೇ ಜಾತಿಪಟ್ಟಿಯಿಂದ ರಾಜ್ಯ ಸರ್ಕಾರ ಕೈಬಿಡಲಿದೆ. ಆದ್ದರಿಂದ ಮಾದಿಗ–ಛಲವಾದಿ ಸೇರಿ ಎಲ್ಲ ವರ್ಗದ ಜನರು ಕಡ್ಡಾಯವಾಗಿ ಮೂಲ ಜಾತಿ ಬರೆಯಿಸಬೇಕು ಎಂದರು.

ಪರಿಶಿಷ್ಟ ಸಮುದಾಯದಲ್ಲಿನ ಎಲ್ಲರೂ ನೈಜ ಮಾಹಿತಿ ನೀಡಬೇಕು. ಪೂರ್ವಿಕರ ಕುಲಕಸುಬು, ಈಗ ನಮ್ಮ ವೃತ್ತಿಯ ಮಾಹಿತಿ ನೀಡಬೇಕು. ಆಗ ಮಾತ್ರ ಮೀಸಲಾತಿ ಸೌಲಭ್ಯ ಪಡೆಯಲು ಸಹಕಾರಿ ಆಗಲಿದೆ ಎಂದು ಹೇಳಿದರು.

ದೇಶದಲ್ಲಿಯೇ ಮೊದಲ ಪ್ರಯತ್ನವಾಗಿ ಆಪ್ ಮೂಲಕ ಜಾತಿಗಣತಿ ಕಾರ್ಯ ಕೈಗೊಂಡಿದ್ದು, ಆರಂಭದಲ್ಲಿ ಸಮಸ್ಯೆ ಆಗಿತ್ತು. ಈಗ ಸರಿದಾರಿಗೆ ಬಂದಿದೆ. ಏನಾದರೂ ಸಮಸ್ಯೆಗಳು ಕಂಡುಬಂದ ತಕ್ಷಣ ಆಯೋಗಕ್ಕೆ ದೂರು ಸಲ್ಲಿಸುತ್ತಿದ್ದು, ಅವರು ಸರಿಪಡಿಸುತ್ತಿದ್ದಾರೆ. ಆದರೂ ಕಾರ್ಯ ಪೂರ್ಣಗೊಂಡ ಬಳಿಕವೇ ವಾಸ್ತವಾಂಶ ಗೊತ್ತಾಗಲಿದೆ ಎಂದು ತಿಳಿಸಿದರು.ಬೀದಿಬದಿ ಸ್ವಚ್ಛತೆ, ಚಪ್ಪಲಿ ಹೊಲಿಯುವುದು, ಹೋಟೆಲ್, ಕಟ್ಟಡ ನಿರ್ಮಾಣ ಸೇರಿ ವಿವಿಧ ಕ್ಷೇತ್ರದಲ್ಲಿ ಕೂಲಿಕಾರರಾಗಿರುವ ಮಾದಿಗರು ಬಹುಸಂಖ್ಯೆಯಲ್ಲಿ ಕೃಷಿಕಾರ್ಮಿಕರು. ಭೂತಾಯಿಗೆ ಹಸಿರು ಸೀರೆ ಉಡಿಸುವಲ್ಲಿ ಮುಂಚೂಣಿಯಲ್ಲಿರುವ ಶ್ರಮಿಕರು. ಈ ಮೂಲಕ ದೇಶದ ಕೃಷಿ ಕ್ಷೇತ್ರ ಬಲವರ್ಧನೆಗೆ ಶ್ರಮಿಸುತ್ತಿದ್ದು, ಬಸವಣ್ಣ ಸಾರಿದ ಕಾಯಕ ತತ್ವದ ರಾಯಭಾರಿಗಳು ಮಾದಿಗರು ಎಂದು ಬಣ್ಣಿಸಿದರು.

ಇಂತಹ ವರ್ಗವನ್ನು ಮುಖ್ಯವಾಹಿನಿಗೆ ತರಲು ಒಳಮೀಸಲಾತಿಯೊಂದೇ ಪರಿಹಾರ. ಈ ಸತ್ಯವನ್ನು ಅರಿತು ಸಾಮಾಜಿಕ ನ್ಯಾಯದ ಹರಿಕಾರ ಸಿದ್ದರಾಮಯ್ಯ ರಾಜ್ಯದಲ್ಲಿ ಜಾತಿಗಣತಿದ ಸರ್ವೇ ಮೂಲಕ 101 ಜಾತಿ ಜನರ ಬದುಕಿನ ಸತ್ಯ ಅರಿತು, ಮೀಸಲಾತಿ ಹಂಚಿಕೆ ಮಾಡಲು ಮುಂದಾಗಿರುವುದು ಐತಿಹಾಸಿಕ ಘಟನೆ ಆಗಲಿದೆ ಎಂದರು.

ನ್ಯಾ.ಎಚ್.ಎನ್.ನಾಗಮೋಹನ್ ದಾಸ್ ಆಯೋಗ ಈಗಾಗಲೇ ಸರ್ಕಾರಿ ಇಲಾಖೆ, ನಿಗಮ ಮಂಡಳಿ, ಸಹಕಾರ ಸಂಘ ಸೇರಿ ವಿವಿಧ ಕ್ಷೇತ್ರದಲ್ಲಿ ಯಾವ ಜಾತಿ ಜನರು ಇದ್ದಾರೆಂಬ ಮಾಹಿತಿ ಸಂಗ್ರಹಿಸಿದೆ.

ಪುಟ ↘ 2

## ಫಾಸ್ಟ್ ನ್ಯೂಸ್

### ವ್ಯಕ್ತಿ ಕಾಣೆ: ಪತ್ತೆಗೆ ಮನವಿ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕು ಹೊಸಹಳ್ಳಿ ಗ್ರಾಮದ ಅಲ್ತಾಫ್ (35) ಎಂಬ ವ್ಯಕ್ತಿ ಕಾಣೆಯಾದ ಕುರಿತು 2024ರ ಡಿಸೆಂಬರ್ 03ರಂದು ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ವ್ಯಕ್ತಿಯ ಚಹರೆ ಇಂತಿದೆ. ಅಲ್ತಾಫ್ ತಂದೆ ಮಹಮ್ಮದ್ ಸುಮಾರು 35 ವರ್ಷ, 5.06 ಅಡಿ ಎತ್ತರ, ಕೋಲು ಮುಖ, ಸಾಧಾರಣ ಮೈಕಟ್ಟು, ದುಂಡು ಮುಖ, ಗೋದಿ ಮೈಬಣ್ಣ, ತಲೆಯಲ್ಲಿ ಸುಮಾರು 03 ಇಂಚು ಉದ್ದದ ಕಪ್ಪು ಕೂದಲು ಇರುತ್ತದೆ. ಮನೆಯಿಂದ ಹೋಗುವಾಗ ಬಿಳಿ ಬಣ್ಣದ ಅಂಗಿ ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ, ಹಿಂದಿ, ಉರ್ದು ಭಾಷೆ ಮಾತನಾಡುತ್ತಾನೆ. ಈ ಮೇಲ್ಕಂಡ ಚಹರೆಯ ವ್ಯಕ್ತಿ ಕುರಿತು ಮಾಹಿತಿ ತಿಳಿದುಬಂದಲ್ಲಿ ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಗೆ ಸಂಪರ್ಕಿಸಬೇಕು ಎಂದು ಪೊಲೀಸ್ ಉಪನಿರೀಕ್ಷಕರು ತಿಳಿಸಿದ್ದಾರೆ.

### ಮಹಿಳೆ ಕಾಣೆ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕು ಕತ್ತೆ ತಿಮ್ಮಯ್ಯನಹಟ್ಟಿ ಗ್ರಾಮದ ಗೀತಮ್ಮ (27) ಎಂಬ ಮಹಿಳೆ ಕಾಣೆಯಾದ ಕುರಿತು 2024ರ ಜುಲೈ 07ರಂದು ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಾಣೆಯಾದ ಗೀತಮ್ಮ ತಂದೆ ಸಿದ್ದಪ್ಪ ಸುಮಾರು 27 ವರ್ಷ, ಎಣ್ಣೆಗೆಂಪು ಬಣ್ಣ, ಸಾಧಾರಣ ಮೈಕಟ್ಟು, ಸುಮಾರು 4.6 ಅಡಿ ಎತ್ತರ, ದುಂಡು ಮುಖ ಹೊಂದಿದ್ದು, ಮನೆಯಿಂದ ಹೋಗುವಾಗ ಕೆಂಪು ಬಣ್ಣದ ಪ್ಯಾಂಟ್, ಬಿಳಿ ಬಣ್ಣದ ಟಾಪ್ ಧರಿಸಿರುತ್ತಾರೆ. ಈ ಮೇಲ್ಕಂಡ ಮಹಿಳೆ ಕುರಿತು ಮಾಹಿತಿ ತಿಳಿದುಬಂದಲ್ಲಿ ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಗೆ ಸಂಪರ್ಕಿಸಬೇಕು ಎಂದು ಪೊಲೀಸ್ ಉಪನಿರೀಕ್ಷಕರು ತಿಳಿಸಿದ್ದಾರೆ.

### ಡಿಪ್ಲೊಮಾ ಪ್ರವೇಶಾತಿ: ವಿಶೇಷಚೇತನರಿಂದ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಮೈಸೂರು ಜೆಎಸ್ಎಸ್ ವಿಶೇಷಚೇತನರ ಪಾಲಿಟೆಕ್ನಿಕ್ ವತಿಯಿಂದ 2025–26ನೇ ಸಾಲಿಗೆ ಮೂರು ವರ್ಷಗಳ ಅವಧಿಯ ಡಿಪ್ಲೊಮಾ ಕೋರ್ಸುಗಳ ಪ್ರವೇಶಕ್ಕೆ ವಿಶೇಷಚೇತನ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಜೂನ್ 16 ಅರ್ಜಿ ಸಲ್ಲಿಸಲು ಕೊನೆಯ ದಿನ. ಅನುದಾನಿತ ಕೋರ್ಸುಗಳಾದ ಆರ್ಕಿಟೆಕ್ಚರ್ ಅಸಿಸ್ಟೆಂಟ್‌ಷಿಪ್, ಕಮರ್ಷಿಯಲ್ ಪ್ರಾಕ್ಟೀಸ್, ಕಂಪ್ಯೂಟರ ಸೈನ್ಸ್ ಮತ್ತು ಇಂಜಿನಿಯರಿಂಗ್ ಹಾಗೂ ಅನುದಾನ ರಹಿತ ಕೋರ್ಸುಗಳಾದ ಜ್ಯುಯಲರಿ ಡಿಸೈನ್ ಮತ್ತು ಟೆಕ್ನಾಲಜಿ, ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜನಿಯರಿಂಗ್, ಕಂಪ್ಯೂಟರ್ ಅಪ್ಲಿಕೇಷನ್ಸ್, ಅಪಾರೇಲ್ ಡಿಸೈನ್ ಮತ್ತು ಫ್ಯಾಬ್ರಿಕೇಷನ್ ಟೆಕ್ನಾಲಜಿ, ಎಲೆಕ್ಟ್ರಿಕಲ್ ಇಂಜಿನಿಯರಿಂಗ್ ಮತ್ತು ಎಲೆಕ್ಟ್ರಿಕ್ ವೆಹಿಕಲ್ ಟೆಕ್ನಾಲಜಿ ಕೋರ್ಸುಗಳಿಗೆ ವಿಶೇಷಚೇತನರು ಅರ್ಜಿ ಸಲ್ಲಿಸಬಹುದು. ಪ್ರವೇಶಾರ್ಹತೆ: ಕರ್ನಾಟಕ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಕನಿಷ್ಠ ಶೇ.35 ಅಂಕಗಳೊಂದಿಗೆ ತೇರ್ಗಡೆ ಹಾಗೂ ಮೂಳೆ ಮತ್ತು ಕೀಲು ಅಂಗವಿಕಲತೆ ಶೇ.40 ಮತ್ತು ಮೇಲ್ಪಟ್ಟು, ಕಿವುಡು ಮತ್ತು ಮೂಗು ಅಂಗವಿಕಲತೆ 60 ಡಿಬಿ ಮತ್ತು ಮೇಲ್ಪಟ್ಟು, ಭಾಗಶಃ ಮತ್ತು ಪೂರ್ಣ ಅಂಧತ್ವ 6/60 ಅಥವಾ 20/200 ಸ್ನೆಲೆನ್ ಹೊಂದಿರುವವರು ಅರ್ಜಿ ಸಲ್ಲಿಸಬಹುದು. ಅರ್ಹ ವಿದ್ಯಾರ್ಥಿಗಳಿಗೆ ರಾಜ್ಯ ಮತ್ತು ರಾಷ್ಟ್ರಮಟ್ಟದ ವಿದ್ಯಾರ್ಥಿವೇತನದ ಆರ್ಥಿಕ ಸಹಾಯ ದೊರೆಯುತ್ತದೆ. ಪಾಲಿಟೆಕ್ನಿಕ್‌ನ ಯಶಸ್ವಿ ವಿದ್ಯಾರ್ಥಿಗಳಿಗೆ ಉದ್ಯೋಗ ಮತ್ತು ತರಬೇತಿ ಕೇಂದ್ರದ ಮೂಲಕ ಉದ್ಯೋಗಾವಕಾಶವನ್ನು ಕಲ್ಪಿಸಿಕೊಡಲಾಗುತ್ತದೆ. ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರುಗಳಿಗೆ ಪ್ರತ್ಯೇಕ ವಿದ್ಯಾರ್ಥಿನಿಲಯದ ಸೌಲಭ್ಯ ಕಲ್ಪಿಸಲಾಗಿದೆ. ಪ್ರವೇಶಕ್ಕೆ ಅರ್ಜಿಗಳನ್ನು ಸಮಾನ್ಯ ವರ್ಗದ ಅಭ್ಯರ್ಥಿಗಳು ರೂ100/ ಹಾಗೂ SC/ST/C-1 ವರ್ಗದವರಿಗೆ ರೂ 50/ ನಗದು ಅಥವಾ ಡಿಡಿ ಮೂಲಕ ಮೈಸೂರಿನಲ್ಲಿ ಸಂದಾಯವಾಗುವಂತೆ ಕಳುಹಿಸಿ ಅರ್ಜಿ ಪಡೆಯಯಬಹುದು ಅಥಾವಾ ವೆಬ್ ಸೈಟ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ವೆಬ್ ಸೈಟ್ www.jsspda.org / ದೂರವಾಣಿ ಸಂಖ್ಯೆ 9844644937 ಗೆ ಸಂಪರ್ಕಿಸಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ಜೂನ್ 16 ರೊಳಗೆ ಕಚೇರಿಗೆ ತಲುಪಿಸಬೇಕೆಂದು ಮೈಸೂರಿನ ಜೆಎಸ್ಎಸ್ ವಿಶೇಷಚೇತನರ ಪಾಲಿಟೆಕ್ನಿಕ್ ಪ್ರಾಂಶುಪಾಲರು ತಿಳಿಸಿದ್ದಾರೆ.

### ವಿ.ವಿ. ಮಟ್ಟದ ಕ್ರೀಡೆಯಲ್ಲಿ ಹೊಸದುರ್ಗದ ವಿದ್ಯಾರ್ಥಿಗಳು ಪ್ರಥಮ

» **ಹೊಸದುರ್ಗ**

2024–25 ನೇ ಸಾಲಿನ ದಾವಣಗೆರೆ ವಿಶ್ವವಿದ್ಯಾನಿಲಯದ ಮಹಿಳಾ ಕ್ರೀಡಾಕೂಟದಲ್ಲಿ ಹೊಸದುರ್ಗ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ತಂಡ ವಾಲಿಬಾಲ್ ನಲ್ಲಿ ಪ್ರಥಮ ಸ್ಥಾನ, ತ್ರೋಬಾಲ್ ನಲ್ಲಿ ಪ್ರಥಮ ಸ್ಥಾನ ಮತ್ತು ಬಾಲ್ ಬ್ಯಾಡ್ಮಿಂಟನ್ ನಲ್ಲಿ ತೃತೀಯ ಸ್ಥಾನಗಳಿಸಿದ್ದಾರೆ.ಈ ವರ್ಷದ ಮಹಿಳಾ ಕ್ರೀಡಾಕೂಟದ ಸಮಗ್ರ ಪ್ರಶಸ್ತಿಯಲ್ಲಿ 2ನೇ ಸ್ಥಾನವನ್ನು ಗಳಿಸಿತ್ತು. ಕಾಲೇಜು ಉಪನ್ಯಾಸಕರು, ಸಿಬ್ಬಂದಿಗಳು ಅಭಿನಂದಿಸಿದ್ದಾರೆ.

# ಹಸಿವು ಮುಕ್ತ ಕರ್ನಾಟಕ: ಉತ್ತಮ ನಡೆ

» **ಚಿತ್ರದುರ್ಗ**

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಅನ್ನಭಾಗ್ಯ ಯೋಜನೆಯು ಬಡವರ ಯೋಜನೆಯಾಗಿದ್ದು, ಯಾರೊಬ್ಬರೂ ಹಸಿವಿನಿಂದಬಳಲಬಾರದು,ಪ್ರತಿಯೊಂದು ಬಡ ಕುಟಂಬಗಳೂ ನೆಮ್ಮದಿಯ ಜೀವನ ನಡೆಸಬೇಕು. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರದ ಹಸಿವು ಮುಕ್ತ ಕರ್ನಾಟಕ ಉತ್ತಮ ನಡೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ ಹೇಳಿದರು.

ನಗರದ ಗಾರೇಹಟ್ಟಿಯ ಚೋಳೇಶ್ವರ ದೇವಸ್ಥಾನದ ಸಭಾಂಗಣದಲ್ಲಿ ಶನಿವಾರ ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ವತಿಯಿಂದ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆಯಲ್ಲಿ ಅನ್ನಭಾಗ್ಯ ಯೋಜನೆಯಡಿ ಸಾಂಕೇತಿಕವಾಗಿ 10 ಕೆ.ಜಿ.ಅಕ್ಕಿ ವಿತರಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಸಾರ್ವಜನಿಕರನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡುವ ಕೆಲಸ ಆಗಿದ್ದು, ಗ್ಯಾರಂಟಿ ಯೋಜನೆಗಳನ್ನು ಪಡೆಯಲು ಜನರು



ಕಚೇರಿಗಳಿಗೆ ಅಲೆದಾಡುವಂತಿಲ್ಲ. ನೇರವಾಗಿ ಫಲಾನುಭವಿಗಳ ಖಾತೆಗೆ ಹಣ ಪಾವತಿಯಾಗುತ್ತಿದೆ. ಇದೂ ಸಹ ಜನಪರ ಚಿಂತನೆಯಾಗಿದೆ ಎಂದು ಹೇಳಿದರು.

ಅನ್ನಭಾಗ್ಯ ಯೋಜನೆಯಡಿ ಬಡ ಕುಟುಂಬದ ಪ್ರತಿ ಸದಸ್ಯರಿಗೂ ಪ್ರತಿ ತಿಂಗಳೂ ತಲಾ 05 ಕೆ.ಜಿ.ಅಕ್ಕಿ ನೀಡುತ್ತಿದ್ದು, ಹೆಚ್ಚುವರಿ 05 ಕೆ.ಜಿ.ಅಕ್ಕಿಯ ಬದಲಿಗೆ ಪ್ರತಿ ವ್ಯಕ್ತಿಗೆ ಪ್ರತಿ ತಿಂಗಳು ರೂ.170ಗಳಂತೆ ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುತ್ತಿತ್ತು. ಮಾರ್ಚ್ 2025ರ ಫೆಬ್ರವರಿ ಮಾಹೆಯಿಂದ ಸಂಪೂರ್ಣವಾಗಿ 10 ಕೆ.ಜಿ.ಅಕ್ಕಿಯನ್ನು ವಿತರಣೆ ಮಾಡುತ್ತಿದೆ ಎಂದು ಹೇಳಿದರು.

ಬಡ ಜನರ ಏಳಿಗೆಗಾಗಿ, ಹಿತರಕ್ಷಣೆಗಾಗಿ ಸರ್ಕಾರ ಜನಪರ ಯೋಜನೆ, ಸೌಲಭ್ಯಗಳನ್ನು ನೀಡುತ್ತಿದ್ದು, ಜನರು ಇದರ ಸದುಪಯೋಗ ಪಡೆಯಬೇಕು. ಯಾವುದೇ ಕಾರಣಕ್ಕೂ ಅನ್ನಭಾಗ್ಯ ಯೋಜನೆಯ ಆಹಾರಧಾನ್ಯಗಳನ್ನು ಕಾಳಸಂತೆಯಲ್ಲಿ ಮಾರಾಟ ಮಾಡಬೇಡಿ ಎಂದು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ಡಿ.ಎನ್.ಮೈಲಾರಪ್ಪ ಮಾತನಾಡಿ, ಸಮಾಜದ ಕಟ್ಟಕಡೆಯ ವ್ಯಕ್ತಿಯು ಹಸಿವಿನಿಂದ ನರಳಬಾರದು ಮೂರು ಹೊತ್ತಿನ ಊಟವನ್ನು ಸಂತೃಪ್ತಿಯಿಂದ ಮಾಡಬೇಕು ಎನ್ನುವ ಅನುಪಮ ಕಾಳಜಿಯಿಂದ ಹುಟ್ಟಿಕೊಂಡ ಅನ್ನಭಾಗ್ಯ ಯೋಜನೆಯು ನಿಜವಾದ ಅರ್ಹ ಫಲಾನುಭವಿಗಳಿಗೆ ಸಿಗಬೇಕು ಎಂದು ತಿಳಿಸಿದ ಅವರು, ಅನ್ನಭಾಗ್ಯ ಯೋಜನೆ ದುರುಪಯೋಗ ಮಾಡಿಕೊಳ್ಳದೇ ಅದರ ಸದುಪಯೋಗ ಮಾಡಿಕೊಳ್ಳಿ ಎಂದು ಹೇಳಿದರು.

ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕ ಮಧುಸೂದನ್ ಮಾತನಾಡಿ, ಹಸಿವು ಮುಕ್ತ ಕರ್ನಾಟಕ ಮಾಡುವುದು ಸರ್ಕಾರದ ಉದ್ದೇಶ. ಈ ನಿಟ್ಟಿನಲ್ಲಿ ಅನ್ನಭಾಗ್ಯ ಯೋಜನೆ ಜಾರಿಗೆ ತರುವ ಮೂಲಕ ಪ್ರತಿಯೊಬ್ಬರಿಗೂ ತಲಾ 10 ಕೆ.ಜಿ.ಅಕ್ಕಿ ವಿತರಣೆ ಮಾಡಲಾಗುತ್ತಿದೆ ಎಂದು ಹೇಳಿದರು.

ಅನ್ನಭಾಗ್ಯ ಯೋಜನೆ ದುರುಪಯೋಗವಾದರೆ ಪಡಿತರ ಚೀಟಿ ರದ್ದತಿಗೆ ಕ್ರಮವಹಿಸಲಾವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಆಹಾರ ನಿರೀಕ್ಷಕ ಎಸ್.ಆರ್.ಗಿರಿಧರ್, ನ್ಯಾಯಬೆಲೆ ಅಂಗಡಿ ಅಧ್ಯಕ್ಷ ಎಂ.ಭೀಮಣ್ಣ, ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ಸೇರಿದಂತೆ ನ್ಯಾಯಬೆಲೆ ಅಂಗಡಿ ಮಾಲೀಕರು ಇದ್ದರು.

# ಅಂತರರಾಷ್ಟ್ರೀಯ ವಸ್ತುಸಂಗ್ರಹಾಲಯ ದಿನಾಚರಣೆ

» **ಚಿತ್ರದುರ್ಗ**

ಇಂದಿನ ಪ್ರಸ್ತುತ ಸನ್ನಿವೇಷದಲ್ಲಿ ವಸ್ತು ಸಂಗ್ರಹಾಲಯಕ್ಕಷ್ಟೇ ಸೀಮಿತವಾಗದೇ ಸಂಶೋಧನೆಗೆ ವೇದಿಕೆಗಳಾಗಿದ್ದು ಇಂದಿನ ಕೃತಕ ಬುದ್ದಿ ಮತ್ತೆ ಪೂರಕವಾಗಿ ವಿಭಿನ್ನ ತಂತ್ರಜ್ಞಾನ ಅಳವಡಿಸಿಕೊಳ್ಳುವ ಮೂಲಕ ಯುವಜನತೆಯನ್ನು ತಲುಪಬೇಕಾಗಿದೆ ಎಂದು ಶಿವಮೊಗ್ಗದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಸಹ ಪ್ರಧ್ಯಾಪಕರಾದ ಡಾ. ರಂಗನಾಥರಾವ್. ಹೆಚ್. ಕರಾಡ್ ತಿಳಿಸಿದರು.

ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿ ಸರ್ಕಾರಿ ವಸ್ತುಸಂಗ್ರಹಾಲಯ ಚಿತ್ರದುರ್ಗ ಇದರವತಿಯಿಂದ ರಂಗಯ್ಯನ ಬಾಗಿಲ ಬಳಿ ಹಮ್ಮಿಕೊಳ್ಳಲಾದ ಅಂತರರಾಷ್ಟ್ರೀಯ ವಸ್ತುಸಂಗ್ರಹಾಲಯ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, 1479ರಲ್ಲಿ ಇಟಲಿಯ ರೋಮ್ ನಗರದಲ್ಲಿ ಸ್ಥಾಪಿತವಾದ ಅತ್ಯಂತ ಪ್ರಾಚೀನ ವಸ್ತುಸಂಗ್ರಹಾಲಯ ಬೆಳವಣಿಗೆಯಿಂದ ಪ್ರೇರೇಪಿತರಾದ ವಿಶ್ವದ ಅನೇಕ ದೇಶಗಳು ತಮ್ಮ ಸಂಸ್ಕೃತಿ, ಪರಂಪರೆ ಹಾಗೂ ಇತಿಹಾಸದ ಅಭಿವೃದ್ಧಿಗೆ ಪೂರಕವಾಗಿ ವಸ್ತು ಸಂಗ್ರಹಾಲಯಗಳನ್ನು ಸ್ಥಾಪಿಸಿದ್ದು ವಿಶೇಷವಾಗಿ 1814ರಲ್ಲಿ ಭಾರತದ ಇಂಡಿಯನ್ ಮ್ಯೂಜಿಯಂ ಕಲ್ಕತ್ತಾ ಇದರ ಸ್ಥಾಪನೆ ಹೇಗೆ ಭಾರತದಲ್ಲಿ ವಸ್ತುಸಂಗ್ರಹಾಲಯದ ಬೆಳವಣಿಗೆಗೆ ಪೂರಕವಾಯಿತು ಎಂಬ ವಿಷಯದ ಜೊತೆಗೆ




ವೇಗವಾಗಿ ಬದಲಾಗುತ್ತಿರುವ ಸಮುದಾಯಗಳಲ್ಲಿ ವಸ್ತು ಸಂಗ್ರಹಾಲಯಗಳ ಭವಿಷ್ಯ, ಈ ವಿಷಯವಾಗಿ ಇಂದಿನ ಪ್ರಸ್ತುತ ಸನ್ನಿವೇಷದಲ್ಲಿ ವಸ್ತು ಸಂಗ್ರಹಾಲಯಕ್ಕಷ್ಟೇ ಸೀಮಿತ ವಾಗದೇ ಸಂಶೋಧನೆಗೆ ವೇದಿಕೆಗಳಾಗಿದ್ದು ಇಂದಿನ ಕೃತಕ ಬುದ್ದಿ ಮತ್ತೆ ಪೂರಕವಾಗಿ ವಿಭಿನ್ನ ತಂತ್ರಜ್ಞಾನ ಅಳವಡಿಸಿಕೊಳ್ಳುವ ಮೂಲಕ ಯುವಜನತೆಯನ್ನು ತಲುಪಬೇ ಕಾಗಿದೆ ಎಂದರು.

ಚಿತ್ರದುರ್ಗದ ಸರ್ಕಾರಿ ವಿಜ್ಞಾನ ಕಾಲೇಜಿನ ನಿವೃತ್ತ ಪ್ರಾಂಶುಪಾಲರಾದ ರಾಜಪ್ಪ ಮಾತನಾಡಿ ವಸ್ತು ಸಂಗ್ರಹಾಲಯಗಳು ಜ್ಞಾನದ ಭಂಡಾರವಾಗಿವೆ ಇವುಗಳನ್ನು ವೀಕ್ಷಣೆ ಮಾಡಿ ಇತಿಹಾಸ ತಿಳಿಯಲು ನಾಗರೀಕರು ಮತ್ತು ಯುವ ಜನತೆ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದರು.

ಚಿತ್ರದುರ್ಗ ಮದಕರಿನಾಯಕ ಸಾಂಸ್ಕೃತಿಕ ಕೇಂದ್ರದ ಅಧ್ಯಕ್ಷರಾದ ಗೋಪಾಲಸ್ವಾಮಿ ನಾಯಕರು ಮಾತನಾಡಿ ಚಿತ್ರದುರ್ಗ ನಗರದಲ್ಲಿ ಈಗಿರುವ ವಸ್ತುಸಂಗ್ರಹಾಲಯ ಸ್ಥಾಪನೆಗೆ ಹಲ್ಲೂರು ಶ್ರೀನಿವಾಸ ಜೋಯಿಸರ ಕೊಡುಗೆ ಅಪಾರವಾಗಿದ್ದು ಚಿತ್ರದುರ್ಗ ಇತಿಹಾಸದ ಅಮೂಲ್ಯ ಬೆಳಕು ಚೆಲ್ಲಿದ್ದಾರೆ ನಗರದಲ್ಲಿ ಐತಿಹಾಸಿಕ ಕೋಟೆ ಎದುರುಗಡೆ ಇರುವ ಪಿಲ್ಲರ್‌ಹೌಸ್ ಕಟ್ಟಡವನ್ನು ಪುರಾತತ್ವ ಇಲಾಖೆಯ ಹೆಸರಿಗೆ ಮಾಡಿಸಿಕೊಡಲು ನಗರ ಸಭೆಯ ಮಾಜಿ ಅಧ್ಯಕ್ಷರಾದ ಕಾಂತರಾಜ್‌ರವರು ಅಧ್ಯಕ್ಷರಾಗಿದ್ದಾಗ ಸಂಪೂರ್ಣ ಬೆಂಬಲ ನೀಡಿದರು ಪಿಲ್ಲರ್‌ಹೌಸ್ ಕಟ್ಟಡಕ್ಕೆ ವಸ್ತು ಸಂಗ್ರಹಾಲಯ ಹಸ್ತಾಂತರವಾದರೆ ಪ್ರವಾಸಿಗರಿಗೆ ತುಂಬಾ ಅನುಕೂಲವಾಗುತ್ತದೆ ಎಂದರು.

ಶ್ರೀ ಕ್ಯಾತಲಿಂಗೇಶ್ವರ ದೇವಸ್ಥಾನದ ಸಮಿತಿ ಆದ್ಯಕ್ಷರಾದ ಬೊಮ್ಮಣ್ಣ ಮಾತನಾಡಿ ಚಿತ್ರದುರ್ಗದ ಹತ್ತಿರ ತಮಟಕಲ್‌ನಲ್ಲಿರುವ ಗುಣಮಧುರನ ಶಾಸನ ಸಂರಕ್ಷಣೆಗೆ ಪ್ರಹ್ಲಾದ್. ಜಿ. ಸಹಾಯಕ ನಿರ್ದೇಶಕರು ತುಂಬಾ ಕಾಳಜಿ ವಹಿಸಿದರು ಜಿಲ್ಲೆಯಲ್ಲಿರುವ ಅಮೂಲ್ಯ ಶಾಸನಗಳ ರಕ್ಷಣೆಗೆ ಅವರು ಇನ್ನು ಕ್ರಮವಹಿಸಲಿ ಎಂದರು

ನಗರಸಭೆಯ ಮಾಜಿ ಸದಸ್ಯರಾದ ಮಹಂತೇಶ್ ಮಾತನಾಡಿ ಈಗಿರುವ ರಂಗಯ್ಯನ ಬಾಗಿಲು ಸ್ಮಾರಕ ರಕ್ಷಣೆಗೆ ಸ್ಥಳೀಯ ನಾಗರೀಕರು ಮದಕರಿ ಗಣಪತಿ ಸಮಿತಿಯವರ ಕಾಳಜಿಯಿಂದಾಗಿ ಕೋಟೆ ಬಾಗಿಲು ಉಳಿದು ಬಂದಿದೆ ಎಂದರು.

ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಸಹಾಯಕ ನಿರ್ದೇಶಕರಾದ ಪ್ರಹ್ಲಾದ್. ಜಿ ಮಾತನಾಡಿ ನಮ್ಮ ಇಲಾಖಾ ವತಿಯಿಂದ ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಪ್ರಾಚ್ಯಾವಶೇಷಗಳ ಗ್ರಾಮವಾರು ಸರ್ವೇ ಕಾರ್ಯವನ್ನು ನಡೆಸಲಾಗಿದೆ ಪ್ರಾಚ್ಯಾವಶೇಷಗಳ ಸಂರಕ್ಷಣೆಗೆ ಪ್ರಾಮುಖ್ಯತೆ ವಹಿಸಲಾಗಿದೆ ಮತ್ತು ಜಿಲ್ಲೆಯಲ್ಲಿರುವ ಸ್ಮಾರಕಗಳ ರಕ್ಷಣೆಗೆ ಅಗತ್ಯ ಕ್ರಮ ವಹಿಸಲಾಗುತ್ತಿದೆ ಎಂದರು

ಕಾರ್ಯಕ್ರಮದಲ್ಲಿ ನಗರದ ಸಾರ್ವಜನಿಕರು ಸರ್ಕಾರಿ ಕಲಾ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಸರಿದಾರಿಗೆ ಬಂದಿದೆ ಜಾತಿಗಣತಿ ಕಾರ್ಯ: ಹೆಚ್.ಆಂಜನೇಯ

» **ಮೊದಲ ಪುಟದಿಂದ**

ಈ ಮೂಲ ಎಲ್ಲ ದತ್ತಾಂಶ ಪಡೆದು ಅನ್ಯಾಯಕ್ಕೆ ಒಳಗಾಗಿರುವ ಜಾತಿಯವರಿಗೆ ಹೆಚ್ಚು ಪ್ರಮಾಣದಲ್ಲಿ ಮೀಸಲಾತಿ ನೀಡಲಿದೆ ಎಂದು ಹೇಳಿದರು. ಆದ್ದರಿಂದ ಜಾತಿಗಣತಿ ಸರ್ವೇ ಕಾರ್ಯ ನಮ್ಮ ಅಳಿವು–ಉಳಿವು ಪ್ರಶ್ನೇ ಆಗಿದ್ದು, ಸರ್ಕಾರಿ ನೌಕರರು, ಚಿಂತಕರು, ಹೋರಾಟಗಾರರು ಮಾದಿಗ ಸಮುದಾಯದಲ್ಲಿ 061–ಮಾದಿಗ ಎಂದು ಬರೆಯಿಸುವಂತೆ ಜಾಗೃತಿ ಮೂಡಿಸಬೇಕು. ಅದೇ ರೀತಿ ಇತರ ಜಾತಿಯವರು ಮಾಡಬೇಕು ಎಂದು ತಿಳಿಸಿದರು. ಅಕ್ಟೋಬರ್ 28, 2024ರಂದು ಎಲ್ಲ ಸರ್ಕಾರಿ ಹುದ್ದೆಗಳ ನೇಮಕಾತಿಗೆ ಸಿದ್ದರಾಮಯ್ಯ ಸರ್ಕಾರ ತಡೆವೊಡ್ಡಿದ್ದಾರೆ. ಈ ಮೂಲಕ ಒಳಮೀಸಲಾತಿ ಜಾರಿಗೆ ತಮ್ಮ ಬದ್ಧತೆಯನ್ನು ಮುಖ್ಯಮಂತ್ರಿ ಪ್ರದರ್ಶಿಸಿದ್ದಾರೆ ಎಂದರು. ರಾಜ್ಯದ ಯಾವುದೇ ಮೂಲೆಯಲ್ಲಿ ಬೇಡಜಂಗಮರು ಇಲ್ಲ. ಆದರೂ ಲಿಂಗಾಯಿತರು, ಹಿಂದುಳಿದವರು ಸೇರಿ ನಮ್ಮೆಲ್ಲರ ಪಾಲಿಗೆ ಗುರು ಸ್ಥಾನದಲ್ಲಿರುವ ವೀರಶೈವ ಜಂಗಮರು ಬೇಡಜಂಗಮರು ನಾವೆಂದು ಸುಳ್ಳು ದಾಖಲು ಮಾಡುತ್ತಿದ್ದಾರೆ ಎಂದು ಮಾಜಿ ಸಚಿವ ಎಚ್. ಆಂಜನೇಯ ಆರೋಪಿಸಿದರು. ಆಂಧ್ರಮೂಲದಿಂದ ರಾಜ್ಯಕ್ಕೆ ವಲಸೆ ಬಂದಿದ್ದ ಬೇಡಜಂಗರ ಭಾಷೆ ತೆಲುಗು, ಸತ್ತ ಹಂದಿ–ಧನದ ಮಾಂಸ ಅವರ ಆಹಾರ. ಹೊಟ್ಟೆ ತುಂಬ ಮದ್ಯ ಸೇವಿಸುವ ಜನರು. ಮಾದಿಗರ ಬಳಿ ಬೇಡಿಕೊಂಡು ಬದುಕು ನಡೆಸುತ್ತಿದ್ದ ವರ್ಗ. ಈ ಜಾತಿ ಜನರು ರಾಜ್ಯದಲ್ಲಿ ನಶಿಸಿದೆ ಎಂದರು. ಎಸ್ಸಿ ಪಟ್ಟಿಯಲ್ಲಿನ 101 ಜಾತಿಯಲ್ಲಿನ ಬೇಡಜಂಗಮರು ಒಂದಾಗಿದ್ದು, ಇದನ್ನೇ ದುರ್ಬಳಕೆ ಮಾಡಿಕೊಂಡು ಪರಿಶಿಷ್ಟ ತಟ್ಟೆಯಲ್ಲಿನ ಅನ್ನಕ್ಕೆ ಕನ್ನ ಹಾಕುವ ಕೆಲಸ ವೀರಶೈವರಲ್ಲಿನ ಕೆಲವರು ಮಾಡುತ್ತಿದ್ದಾರೆ. ಇದು ಸರಿಯಲ್ಲ ಎಂದು ಹೇಳಿದರು.

ರಾಜ್ಯದಲ್ಲಿ ಜಾತಿಗಣತಿ ಸಮೀಕ್ಷೆ ವೇಳೆ ಬಹಳಷ್ಟು ಮಂದಿ ನಾವು ಬೇಡಜಂಗಮರು ಎಂದು ಬರೆಯಿಸುತ್ತಿದ್ದು, ಅಂತಹವ ವಿರುದ್ಧ ನ್ಯಾ.ನಾಗಮೋಹನ್ ದಾಸ್ ಆಯೋಗ ಕ್ರಮಕೈಗೊಳ್ಳಬೇಕು. ಜೊತೆಗೆ ಬೇಡಜಂಗಮ ಜಾತಿ ಪ್ರಮಾಣ ಪತ್ರ ವಿತರಿಸುವ ತಹಸೀಲ್ದಾ□□ಗಳನ್ನು ಜೈಲಿಗೆ ಹಾಕಬೇಕೆಂದು ಎಂದು ಆಗ್ರಹಿಸಿದರು. ಬೇಡಜಂಗಮ ಪದವನ್ನೇ ಎಸ್ಸಿ ಪಟ್ಟಿಯಿಂದ ಕೈಬಿಡಲು ಮುಖ್ಯಮಂತ್ರಿ ಮುಂದಾಗಬೇಕು. ಈ ಕಾರ್ಯಕ್ಕೆ ಎಲ್ಲ ಪಕ್ಷಗಳು ಕೈಜೋಡಿಸಬೇಕು ಎಂದು ಕೋರಿದರು. ಒಳಮೀಸಲಾತಿ ಜಾರಿಗೊಳ್ಳುವವರೆಗೂ ಸರ್ಕಾರಿ ಉದ್ಯೋಗ ನೇಮಕಾತಿಗೆ ತಡೆವೊಡ್ಡಲಾಗಿದೆ. ಇದೇ ರೀತಿ ಬ್ಯಾ□□ಲಾಗ್ ಹುದ್ದೆ ಭರ್ತಿ ಮಾಡುತ್ತಿಲ್ಲ. ಒಂದೊಮ್ಮೆ ಮುಂದಾದರೆ ಅಧಿಕಾರಿಗಳ ವಿರುದ್ಧ ತೀವ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು. ಜಾತಿಗಣತಿ ಸಮೀಕ್ಷೆ ಕಾರ್ಯ ಆರಂಭದಲ್ಲಿ ಕುಂಟುತ್ತಾ ಸಾಗುತ್ತಿತ್ತು. ಈಗ ಸರಿದಾರಿಗೆ ಬಂದಿದೆ. ಏನಾದರೂ ಲೋಪ ಕಂಡುಬಂದಲ್ಲಿ ಆಯೋಗಕ್ಕೆ ದೂರು ನೀಡುತ್ತಿದ್ದು, ಅವರ ತಕ್ಷಣ ಸರಿಪಡಿಸುತ್ತಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಓ.ಶಂಕರ್, ಬಿ.ಪಿ.ಪ್ರಕಾಶಮೂರ್ತಿ, ಶರಣಪ್ಪ, ರವಿಚಂದ್ರ ಇತರರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಯಳಗೋಡು ಗ್ರಾಮ ಪಂಚಾಯಿತಿ ಕ್ಷಯಮುಕ್ತ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕಿನ ಯಳಗೋಡು ಗ್ರಾಮ ಪಂಚಾಯಿತಿ ಕ್ಷಯ ಮುಕ್ತ ಗ್ರಾಮ ಪಂಚಾಯಿತಿ ಎಂದು ಘೋಷಣೆ ಆಗಲು ಗ್ರಾಮ ಪಂಚಾಯಿತಿ ಕಾಳಜಿ,ಬದ್ಧತೆಯಿಂದ ಈ ಸಾಧನೆ ಸಾಧ್ಯವಾಗಿದೆ ಎಂದು ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಸಿ.ಓ.ಸುಧಾ ಹೇಳಿದರು.

ತಾಲ್ಲೂಕಿನ ಯಳಗೋಡು ಗ್ರಾಮ ಪಂಚಾಯಿತಿಯಲ್ಲಿ ಶನಿವಾರ ಏರ್ಪಡಿಸಲಾಗಿದ್ದ ಕ್ಷಯಮುಕ್ತ ಭಾರತ ಅಭಿನಂದನಾ ಕಾರ್ಯಕ್ರಮದಲ್ಲಿ ಯಳಗೋಡುಗ್ರಾಮಪಂಚಾಯಿತಿಗೆಕಂಚಿನ ಲೇಪನದ ಮಹಾತ್ಮ ಗಾಂಧೀಜಿಯವರ ಪ್ರತಿಮೆ ಮತ್ತು ಅಭಿನಂದನ ಪತ್ರ ವಿತರಿಸಿ ಅವರು ಮಾತನಾಡಿದರು.

ಯಳಗೋಡು ಗ್ರಾಮ ಪಂಚಾಯಿತಿ ಕ್ಷಯ ಮುಕ್ತ ಆಗಲು ಈ ಗ್ರಾಮದಲ್ಲಿ ಒಂದು ಸಾವಿರ ಜನಸಂಖ್ಯೆಗೆ ವರ್ಷಕ್ಕೆ 30 ಜನರು ಕ್ಷಯ ಸಂಶಯಾಸ್ಪದ ರೋಗಿಗಳು ಆಗಿರುತ್ತಾರೆ. ಅವರನ್ನು ಕಫ ಪರೀಕ್ಷೆಗೆ ಒಳಪಡಿಸಿದಾಗ ಶೇ.1 ಕ್ಕಿಂತ ಕಡಿಮೆ ಕ್ಷಯ ರೋಗಿಗಳನ್ನು ಎಲ್ಲರ ಸಹಕಾರದಿಂದ ಕಂಡು ಹಿಡಿದಿದ್ದಾರೆ. ಹಾಗಾಗಿ ಯಳಗೋಡು ಗ್ರಾಮ ಪಂಚಾಯಿತಿಯು ಕ್ಷಯ ಮುಕ್ತ ಗ್ರಾಮ ಪಂಚಾಯಿತಿ ಎಂದು ಘೋಷಿಸಿರುತ್ತಾರೆ ಎಂದು ಹೇಳಿದರು.

ದೇಶದಲ್ಲಿ ಶೇ.40 ಜನರಿಗೆ ಕ್ಷಯದ ಸೋಂಕು ತಗಲಿರುತ್ತದೆ. ಆದರೆ ಅವರೆಲ್ಲ



ಕ್ಷಯ ರೋಗಿಗಳಲ್ಲ. ಕ್ಷಯ ರೋಗದ ಲಕ್ಷಣಗಳು ಕಂಡು ಬಂದರೆ ಆಗ ಮಾತ್ರ ಕ್ಷಯರೋಗಿ ಎಂದು ಗುರುತಿಸಿ, ಅಂತಹವರಿಗೆ ಆರು ತಿಂಗಳ ಉಚಿತ ಚಿಕಿತ್ಸೆಯನ್ನು ನೀಡಿದರೆ ರೋಗವು ಗುಣಮುಖವಾಗಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕ್ಷಯ ರೋಗವು ಮೈಕೋ ಬ್ಯಾಕ್ಟೀರಿಯಂ ಟ್ಯೂಬರ್ ಕ್ಯೂಲೈ ಎಂಬ ಬ್ಯಾಕ್ಟೀರಿಯಾದಿಂದ ಹರಡುತ್ತದೆ. ಇದು ಗಾಳಿಯಿಂದ ಒಬ್ಬರಿಂದ ಒಬ್ಬರಿಗೆ ಹರಡುವ ಸಾಂಕ್ರಾಮಿಕ ರೋಗವಾಗಿರುತ್ತದೆ ಹಾಗೂ ಕ್ಷಯ ರೋಗವು ರೋಗ ನಿರೋಧಕ ಶಕ್ತಿ ಕಡಿಮೆ ಇರುವಂತಹ ಜನರಿಗೆ ಬೇಗನೆ ಹರಡುತ್ತದೆ. ಈ ರೋಗದ ರೋಗ ಲಕ್ಷಣಗಳು ಅಂದರೆ ಜ್ವರ ಬರುವುದು, ಒಂದು ವಾರಕ್ಕಿಂತ ಹೆಚ್ಚು ಕೆಮ್ಮು, ತೂಕ ಕಡಿಮೆಯಾಗುವುದು, ಸಂಜೆ ಹೊತ್ತಿನಲ್ಲಿ ಬೆವರುವುದು, ಜ್ವರ ಕಾಣಿಸುವುದು, ಹಸಿವಾಗದೆ ಇರುವುದು, ಎದೆ ನೋವು, ಕೆಮ್ಮುವಾಗ ಕಫದಲ್ಲಿ ರಕ್ತ ಬೀಳುವುದು ಈ ರೀತಿಯ ಹಲವು ಲಕ್ಷಣಗಳು ಕಂಡು ಬಂದಲ್ಲಿ ಶೀಘ್ರವಾಗಿ ಪರೀಕ್ಷಿಸಿ, ರೋಗ ಪತ್ತೆ ಹಚ್ಚಿದ ತಕ್ಷಣ ಆರು ತಿಂಗಳು ಉಚಿತ ಕ್ಷಯ ಚಿಕಿತ್ಸೆಯನ್ನು ನೀಡುವುದರ ಮುಖಾಂತರ ಕ್ಷಯ ರೋಗವನ್ನು ನಾಶ ಮಾಡಬಹುದು ಎಂದು ತಿಳಿಸಿದರು.

ತಂಬಾಕು ಸೇವನೆ ಸಿಗರೇಟು ಮದ್ಯಪಾನ, ಗುಟುಕ ಸೇವಿಸುವ ಜನರಲ್ಲಿ ರೋಗನಿರೋಧಕ ಶಕ್ತಿ ಕಡಿಮೆ ಇದ್ದು, ಅಂತಹವರಿಗೆ ಈ ರೋಗವು ಬೇಗನೆ ಹರಡುತ್ತದೆ ಮತ್ತು ಮಧುಮೇಹ ಕಾಯಿಲೆ ಇರುವವರೆಗೂ ಹಾಗೂ ಅಪೌಷ್ಟಿಕ ಕೊರತೆಯಿಂದ ಕೂಡ ಬಳಲುತ್ತಿರುವವರು ಬೇಗನೆ ಈ ಕ್ಷಯ ರೋಗಕ್ಕೆ ತುತ್ತಾಗುವ ಸಾಧ್ಯತೆ ಹೆಚ್ಚಿರುತ್ತದೆ. ಆದ್ದರಿಂದ ಈ ಮೇಲಿನ ಲಕ್ಷಣಗಳು ಕಂಡು ಬಂದಲ್ಲಿ ತಕ್ಷಣವೇ ಹಿಂಜರಿಯದೆ ಕಫ ಪರೀಕ್ಷೆ ಮಾಡಿಸಿಕೊಳ್ಳಿ ಎಂದು ತಿಳಿಸಿದರು.

ಗ್ರಾಮದ ಒಳಿತಿಗಾಗಿ ಗ್ರಾಮದ ಅಧ್ಯಕ್ಷರು, ಗ್ರಾಮ ಪಂಚಾಯಿತಿ ಸದಸ್ಯರು, ಯಾವುದೇ ಗ್ರಾಮ ಪಂಚಾಯಿತಿ ಸಭೆಯಲ್ಲಿ ಕ್ಷಯರೋಗದ ಬಗ್ಗೆ ಮುಕ್ತವಾಗಿ ಮಾತನಾಡಿ ಕ್ಷಯರೋಗದ ಬಗ್ಗೆ ಜಾಗೃತಿ ಮೂಡಿಸಿದರೆ ಮಾತ್ರ ಕ್ಷಯ ಮುಕ್ತ ಭಾರತ ಮಾಡಲು ಸಾಧ್ಯ ಎಂದು ತಿಳಿಸಿದರು. ಇದರಲ್ಲಿ ಸಮುದಾಯದ ಎಲ್ಲಾರ ಪಾತ್ರ ಹೆಚ್ಚಿರುತ್ತದೆ. ಹಾಗೂ ಅಂತರ್ ಇಲಾಖೆಯವರ ಸಹಕಾರ ಕೂಡ ಅಷ್ಟೇ ಪ್ರಾಮುಖ್ಯತೆ ಹೊಂದಿದೆ ಎಂದು ತಿಳಿಸಿದರು.

ಗ್ರಾಮ ಪಂಚಾಯಿತಿ ಸದಸ್ಯ ಬಸವರಾಜ್ ಮಾತನಾಡಿ, ಸಮುದಾಯದ ಪ್ರತಿಯೊಬ್ಬರಿಗೂ ಇನ್ನೂ ಹೆಚ್ಚಿನ ಜಾಗೃತಿ ಮೂಡಿಸಿ ಕ್ಷಯ ಮುಕ್ತ ಭಾರತ ಮಾಡೋಣ ಎಂದು ತಿಳಿಸಿದರು.

ಸಭೆಯಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಅನಿತಾ ನಾಗರಾಜ್, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಪ್ರಹ್ಲಾದ್, ಗ್ರಾಮ ಪಂಚಾಯಿತಿ ಸದಸ್ಯರಾದ ಬಸವರಾಜ್, ರೆಹಮತ್ ಉಲ್ಲಾ, ಮಹಾಂತೇಶ್, ದಂಡೆಪ್ಪ, ವೆಂಕಟೇಶ್, ತಿಪ್ಪೇಸ್ವಾಮಿ ಮತ್ತು ವೈದ್ಯಾಧಿಕಾರಿ ಅಶ್ವಿನಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಜಾನಕಿ, ಸಮುದಾಯ ಆರೋಗ್ಯ ಅಧಿಕಾರಿ ಶಾಲಿನಿ, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳಾದ ಜ್ಯೋತಿ, ವಿಜಯ್ ಕುಮಾರಿ, ಸುನಿತಾ, ಆರೋಗ್ಯ ನಿರೀಕ್ಷಣಾಧಿಕಾರಿ ಕುಚೇಲ. ಫಾರ್ಮಸಿ ಅಧಿಕಾರಿ ರಾಮರೆಡ್ಡಿ ಹಾಗೂ ಆಶಾ ಕಾರ್ಯಕರ್ತರು, ಗ್ರಾಮದ ಮುಖಂಡರು ಇದ್ದರು.

## ಫಾಸ್ಟ್ ನ್ಯೂಸ್

### ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ

» **ಹೊಸದುರ್ಗ**

ಕನಕ ನೌಕರರ ಸಾಂಸ್ಕೃತಿಕ ಸಂಘದ ವತಿಯಿಂದ ಪ್ರಸಕ್ತ ಸಾಲಿನ ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿಯಲ್ಲಿ ಶೇ. 85 ಕ್ಕಿಂತ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಮೇ. 25 ಕೊನೆಯ ದಿನವಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರಥಮ ಬಹುಮಾನ ₹5000, ದ್ವಿತೀಯ ಹಾಗೂ ತೃತೀಯ ಬಹುಮಾನ ಕ್ರಮವಾಗಿ ₹3000 ಹಾಗೂ ₹2000 ನಗದು ನೀಡುವುದರ ಜೊತೆಗೆಅಭಿನಂದನೆಸಲ್ಲಿಸಲಾಗುವುದು.ತಾಲ್ಲೂಕಿನ ಕುರುಬ ಸಮಾಜದ ವಿದ್ಯಾರ್ಥಿಯಾಗಿರಬೇಕು. ಅರ್ಜಿಯೊಂದಿಗೆ ಎಸ್.ಎಸ್.ಎಲ್.ಸಿ ಅಥವಾ ಪಿಯುಸಿಯ ಅಂಕಪಟ್ಟಿ ನಕಲು, ಜಾತಿ ಪ್ರಮಾಣಪತ್ರ ಮತ್ತು ಆಧಾರ್ ಕಾರ್ಡ್ ಪ್ರತಿಯನ್ನು ನೀಡಬೇಕು. ಹೆಚ್ಚಿನ ಮಾಹಿತಿಗಾಗಿ ಎಂ.ಆರ್. ಉಮೇಶ್ 9448862731, ಅಂಜಿನಪ್ಪ 8105411538, ಜಗನ್ನಾಥ್ 9880243550 ಅಥವಾ ಡಿ. ಶಿವಕುಮಾರ್ 9482762266 ಕ್ಕೆ ಸಂಪರ್ಕಿಸಬಹುದು ಎಂದು ಕನಕ ನೌಕರರ ಸಾಂಸ್ಕೃತಿಕ ಸಂಘದ ಅಧ್ಯಕ್ಷ ಮಹಾಂತೇಶ್ ತಿಳಿಸಿದ್ದಾರೆ

### ಎಸ್. ನಿಜಲಿಂಗಪ್ಪ ಶಿಕ್ಷಣ ಸಂಸ್ಥೆಗೆ ಉತ್ತಮ ಫಲಿತಾಂಶ

» **ಹೊಸದುರ್ಗ**

ಪಟ್ಟಣದ ಎಸ್. ನಿಜಲಿಂಗಪ್ಪ ಶಿಕ್ಷಣ ಸಂಸ್ಥೆಯೂ ಈ ಬಾರಿಯ ಎಸ್.ಎಸ್.ಎಲ್.ಸಿ (ಸಿಬಿಎಸ್.ಇ) ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಪಡೆದಿದೆ.

**ತಾಲ್ಲೂಕಿಗೆ ಪ್ರಥಮ** : ಎಸ್. ನಿಜಲಿಂಗಪ್ಪ ಶಿಕ್ಷಣ ಸಂಸ್ಥೆಯ ಚಿನ್ಮಯಿ ಎಸ್ ಎನ್ 487 ಅಂಕಗಳಿಸಿ ತಾಲ್ಲೂಕಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಹೆಚ್. ಎಸ್. ಕುಶಾಲ್ 476 ಹಾಗೂ ರಕ್ಷಿತ ವಿ 473 ಅಂಕಗಳಿಸಿ ಶಾಲೆಗೆ ಕ್ರಮವಾಗಿ ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದಿದ್ದಾರೆ. ಉತ್ತಮ ಅಂಕಗಳಿಸಿರುವ ವಿದ್ಯಾರ್ಥಿಗಳಿಗೆ ಸಂಸ್ಥೆಯ ಅಧ್ಯಕ್ಷ ಎಂ ಶಿವಲಿಂಗಪ್ಪ, ಉಪಾಧ್ಯಕ್ಷ ಕೆ.ಎಸ್. ಪುಟ್ಟರಾಜು, ಕಾರ್ಯದರ್ಶಿ ಕೆ.ಎಸ್. ಕಲ್ಮಠ್, ಸಿಬ್ಬಂದಿಗಳು ಅಭಿನಂದನೆ ಸಲ್ಲಿಸಿದ್ದಾರೆ.

### ಇಸ್ಪೀಟ್ ಜೂಜಾಟ : ಹಣ ವಶ

» **ಚಳ್ಳಕೆರೆ**

ತಾಲ್ಲೂಕಿನ ಹುಲಿಕುಂಟೆಬೋವಿಕಾಲೋನಿಯಲ್ಲಿ ಶನಿವಾರ ಮಧ್ಯಾಹ್ನ ದಾತಾಬೋವಿಯವರ ಜಮೀನು ರಸ್ತೆಯಲ್ಲಿ ಜಾಜೂಟವಾಡುತ್ತಿದ್ದ ಐವರನ್ನು ವಿಚಾರಣೆ ನಡೆಸಿದ ಪೊಲೀಸರು ಅವರಿಂದ ಜೂಜಾಟದ ಹಣ 41140 ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದಾರೆ. ಪಿಎಸ್ಐ ಧರೆಪ್ಪಬಾಳಪ್ಪ ದೊಡ್ಡಮನಿ, ಪೇದೆಗಳಾದ ತಿರುಕಪ್ಪತಳವಾರ್, ಧನಂಜಯಮೂರ್ತಿ ತಮಗೆ ದೊರೆಯ ಮಾಹಿತಿ ಆಧರಿಸಿ ಮೇಲ್ಕಂಡ ಸ್ಥಳದಲ್ಲಿ ದಾಳಿ ನಡೆಸಿದಾಗ ಜೂಜಾಟವಾಡುತ್ತಿದ್ದ ಗ್ರಾಮದ ಐದು ಜನರನ್ನು ವಶಕ್ಕೆ ಪಡೆದುಕೊಂಡು ಪ್ರಕರಣ ದಾಖಲಿಸಿದ್ದಾರೆ.

### ಏಕ ಬಳಕೆ ಪ್ಲಾಸ್ಟಿಕ್ ಬಳಸಿದರೆ ದಂಡ



» **ಹೊಸದುರ್ಗ**

ಪಟ್ಟಣದಲ್ಲಿ ಪಾಸ್ಟಿಕ್ ಕವರ್‌ಗಳನ್ನು ಬಳಸುತ್ತಿರುವ ಹೋಟೆಲ್, ಎಗ್ ರೈಸ್, ಪಾನಿಪುರಿ, ಹಣ್ಣು ಮತ್ತು ತರಕಾರಿಗಳ ಅಂಗಡಿಗಳ ಮೇಲೆ ಪುರಸಭೆ ಮುಖ್ಯಾಧಿಕಾರಿ ಬಿ.ಎಲ್ ಯೋಗೀಶ್ ನೇತೃತ್ವದ ತಂಡ ದಾಳಿ ನಡೆಸಿ ದಂಡ ವಿಧಿಸಿದ ಘಟನೆ ನೆಡೆಯಿತು. ಹೋಟೆಲ್, ತರಕಾರಿ, ಹೂ ಮತ್ತು ಹಣ್ಣಿನ ಅಂಗಡಿ ಮಾಲಿಕರುಗಳು ಪ್ಲಾಸ್ಟಿಕ್ ಬಳಸಿ ಆಹಾರ ಪಟ್ಟಣಗಳನ್ನು ಕಟ್ಟವುದು ಹಾಗೂ ತರಕಾರಿ, ಹೂ ಮತ್ತು ಹಣ್ಣಿನ ಅಂಗಡಿಯವರು ಪ್ಲಾಸ್ಟಿಕ್ ಬಳಸಿ ಸಾಮಾಗ್ರಿಗಳನ್ನು ನೀಡುತ್ತಿರುವುದು ತಿಳಿದು ಬಂದ ಹಿನ್ನೆಲೆಯಲ್ಲಿ ಮುಖ್ಯಾಧಿಕಾರಿ ಬಿ.ಎಲ್ ಯೊಗೇಶ್ ಅವರು ಪುರಸಭೆ ಆರೋಗ್ಯ ನಿರಿಕ್ಷರರ ತಂಡದೊಂದಿಗೆ ದಾಳಿ ನೆಡೆಸಿದರು. ಈ ವೇಳೆ ಪ್ಲಾಸ್ಟಿಕ್ ಬಳಕೆ ಮಾಡಲಾಗುತ್ತಿದ್ದ ಹೋಟೆಲ್, ಎಗ್ ರೈಸ್ ಗಾಡಿಗಳು, ತರಕಾರಿ, ಹೂ ಮತ್ತು ಹಣ್ಣಿನ ಅಂಗಡಿಗಳ ಮೇಲೆ ದಂಡ ಹಾಕಿ 2250/– ವಸೂಲಿ ಮಾಡಿದರುಪುರಸಭೆ ಮುಖ್ಯಾಧಿಕಾರಿ ಬಿ.ಎಲ್. ಯೋಗೀಶ್ ಮಾತನಾಡಿ ಹೋಟೆಲ್, ತರಕಾರಿ, ಹೂ ಮತ್ತು ಹಣ್ಣಿನ ಅಂಗಡಿ ಮಾಲಿಕರುಗಳು ಪ್ಲಾಸ್ಟಿಕ್ ಬಳಸದಂತೆ ಪೇಪರ್ ಬ್ಯಾಗ್ ಹಾಗೂ ಬಾಳೆಎಲೆಗಳನ್ನು ಬಳಸಬೇಕು ಹಾಗೂ ಆಹಾರ ತಯಾರಿಸಲು ಕೃತಕ ಬಣ್ಣ, ಟೆಸ್ಟಿಂಗ್ ಪೌಡರ್ ಬಳಕೆಯೂ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ. ತರಕಾರಿ ಮತ್ತು ಹಣ್ಣು ಹೂ ಮಾರಾಟಗಾರರು ಪ್ಲಾಸ್ಟಿಕ್ ಕೈ ಚೀಲಗಳನ್ನು ಬಳಸದೆ, ಬಟ್ಟೆ ಚೀಲ ಅಥವಾ ಪೇಪರ್ ಬ್ಯಾಗ್‌ಗಳನ್ನು ಬಳಸಬೇಕು ಪರಿಸರ ಮಾಲಿನ್ಯವನ್ನು ತಡಗಟ್ಟುವಲ್ಲಿ ಸಹಕರಿಸಬೇಕಾಗಿ ಎಂದು ತಿಳಿಸಿದರು.

# ತುರ್ತು ಪರಿಸ್ಥಿತಿ ನಿರ್ವಹಣೆ, ನಾಗರಿಕ ರಕ್ಷಣಾ ಕಾರ್ಯಾಚರಣೆಯ ಅಣುಕು ಪ್ರದರ್ಶನ





» **ದಾವಣಗೆರೆ**

ವೈಮಾನಿಕ ದಾಳಿ ಎದುರಾದಾಗ ಸ್ಥಳೀಯ ಜನರು ಭಯಭೀತರಾಗದೇ ತುರ್ತು ಪರಿಸ್ಥಿತಿಯನ್ನು ಹೇಗೆ ಎದುರಿಸಬೇಕೆಂದು ಜನರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಅಣುಕು ಪ್ರದರ್ಶನ ಕೈಗೊಳ್ಳಲಾಯಿತು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದರು.

ಭಾನುವಾರ(ಮೇ.18) ರಂದು ನಗರದ ಮಹಾನಗರಪಾಲಿಕೆ ಆರವಣದಲ್ಲಿ ನಡೆದ ಅಣುಕು ಪ್ರದರ್ಶನದ ನಂತರ ಮಾತನಾಡಿದ ಅವರು ತುರ್ತು ಪರಿಸ್ಥಿತಿ ಎದುರಿಸಲು ಜನರಿಗೆ ತಿಳಿಸುವ ಎಚ್ಚರಿಕೆ ಗಂಟೆಯೂ ಸರಿಯಾದ ಸಮಯಕ್ಕೆ ಶಬ್ದ ಮಾಡುವಂತೆ ಗಮನ ವಹಿಸಲಾಗುತ್ತದೆ. ಗಾಯಾಳುಗಳಾದ ಸಾರ್ವಜನಿಕರನ್ನು ಅಂಬ್ಯುಲೆನ್ಸ್ ಗೆ ವರ್ಗಾಯಿಸುವಾಗ ನಿಧಾನವಾಗಿ ತುಂಬಾ ಜಾಗರೂಕತೆಯಿಂದ ಸ್ಥಳಾಂತರಿಸಬೇಕು. ಯುದ್ದದಂತಹ ತುರ್ತುಪರಿಸ್ಥಿತಿ ಸಂದರ್ಭದಲ್ಲಿ ಸರ್ಕಾರ ಹೇಗೆ ಕೆಲಸ ನಿರ್ವಹಿಸುತ್ತದೆ ಎಂದು ಅವರು ತಿಳಿಸಿದರು. ನಗರದಲ್ಲಿ ವೈಮಾನಿಕ ದಾಳಿಯಾದಾಗ ಅದಕ್ಕೆ ಇಲಾಖೆ ಅಧಿಕಾರಿಗಳು ಯಾವ ತರಹ ಕಾರ್ಯಾಚರಣೆ, ಪರಿಹಾರ ಕಂಡುಕೊಳ್ಳುತ್ತೇವೆ ಎನ್ನುವುದನ್ನು ತಿಳಿಸುವ ಅಣುಕು ಪ್ರದರ್ಶನ ಇದಾಗಿದೆ. ಬಾಂಬ್ ಬಿದ್ದಿದೆ ಎಂದು ಮಾಹಿತಿ ತಿಳಿದ ಕೂಡಲೇ ಬಾಂಬ್ ಸ್ಕ್ವಾಡ್ ತಕ್ಷಣ ಹೋಗಿ ಸ್ಥಳೀಯ ಪರಿಸ್ಥಿತಿ ಅರಿತು ಸ್ಫೋಟಗೊಳ್ಳದ ಬಾಂಬ್ ಗಳನ್ನು ನಿಷ್ಕ್ರಿಯಗೊಳಿಸಿದರು. ಪೊಲೀಸ್ ಅಗ್ನಿಶಾಮಕ ದಳ ಅಂಬುಲೆನ್ಸ್ ಸ್ವಯಂಸೇವಕರು ಬಂದು ಭಯಭೀತರಾದ ಜನರನ್ನು ಸುರಕ್ಷಿತ ಸ್ಥಳಕ್ಕೆ ಕರೆದೊಯ್ದರು. ಗಾಯಾಳುಗಳನ್ನು ಆಸ್ಪತ್ರೆಗೆ ಸ್ಥಳಾಂತರಗೊಳಿಸಲಾಯಿತು. ಪ್ರಥಮ ಚಿಕಿತ್ಸೆಯ ಕ್ಯಾಂಪ್ ಗಳನ್ನು ಪ್ರಾರಂಭಿಸಲಾಯಿತು. ಅವುಗಳ ಪರಿಸ್ಥಿತಿಗನುಗುಣವಾಗಿ ಕಾರ್ಯಗಳನ್ನು ನಿಭಾಯಿಸುವ ಬಗ್ಗೆ ಪ್ರಾತ್ಯಕ್ಷಿಕೆಯನ್ನು ಕೈಗೊಳ್ಳಲಾಯಿತು.

ಬಾಂಬ್ ದಾಳಿಯಾದ ತಕ್ಷಣ ಈ ಅವಘಡ ಸಂಭವಿಸಿರುವ ಬಗ್ಗೆ, ತುರ್ತು ಸಂಖ್ಯೆ 112 ಮುಖಾಂತರ ಜಿಲ್ಲಾ ನಿಯಂತ್ರಣ ಕೊಠಡಿಗೆ ಮಾಹಿತಿಯನ್ನು ನೀಡುತ್ತಿರುವುದು ಹಾಗೂ ಎಚ್ಚರಿಕೆ ಗಂಟೆಯನ್ನು ಘೋಷಿಸುತ್ತಿರಬೇಕು. ಮಾಹಿತಿ ತಲುಪಿದ ಕೂಡಲೇ ತುರ್ತು ಆಪದ್ಬಾಂದವನಾಗಿ 112 ವಾಹನ ಆಗಮಿಸಿದ್ದು, ಸಾರ್ವಜನಿಕರೆಲ್ಲರಿಗೂ ಆತ್ಮಸ್ಥೈರ್ಯವನ್ನು ತುಂಬಿ ಘಟನಾ ಸ್ಥಳದ ಹತ್ತಿರ ಸುಳಿಯದಂತೆ ಜಾಗೃತಿ ವಹಿಸಬೇಕು. ಹಾಗೂ ಸಾರ್ವಜನಿಕರ ರಕ್ಷಣೆಗಾಗಿ ಕಾರ್ಯಪ್ರವೃತ್ತರಾಗಿರುವುದು.

ನಂತರ ಕಂಟ್ರೋಲ್ ರೂಂ ನಿಂದ ಬೆಸ್ಕಾಂ ಇಲಾಖೆಗೆ ಮಾಹಿತಿ ರವಾನೆ ಮಾಡಿ, ಇಂತಹ ಅನಿರೀಕ್ಷಿತ ಸಂದರ್ಭಗಳಲ್ಲಿ, ವಿದ್ಯುತ್ ಅವಘಡಗಳು ಸಂಭವಿಸುವ ಸಾಧ್ಯತೆ ಇರುವುದರಿಂದ, ನೆರೆದಿರುವ ಸಾರ್ವಜನಿಕರಿಗೆ ಹಾಗೂ ರಕ್ಷಣೆಗೆ ಆಗಮಿಸಲಿರುವ ವಿವಿಧ ಇಲಾಖೆಯ ಪಡೆಗಳಿಗೆ ಯಾವುದೇ ತೊಂದರೆಯಾಗದಂತೆ ಮುನ್ನೆಚ್ಚರಿಕಾ ಕ್ರಮವಾಗಿ ವಿದ್ಯುಚ್ಛಕ್ತಿ ಸಂಪರ್ಕವನ್ನು ಕಡಿತಗೊಳಿಸಬೇಕು.

ಘಟನಾ ಸ್ಥಳಕ್ಕೆ ಶ್ವಾನದಳದವನ್ನು ಬಾಂಬ್ ಸ್ಫೋಟ ನಡೆದ ಸ್ಥಳದಲ್ಲಿ ಯಾವುದಾದರೂ ಸಿಡಿಯದೇ ಉಳಿದ ಅಥವಾ ಸಿಡಿಯಬಹುದಾದ ಸ್ಫೋಟಕ ವಸ್ತುಗಳು ಅಥವಾ ಇನ್ನಿತರೆ ಅಪಾಯಕಾರಿ ವಸ್ತುಗಳ ಲಭ್ಯತೆಯ ಬಗ್ಗೆ ಶೋಧನೆಯನ್ನು ನಡೆಸಿ, ಅಪಾಯಕಾರಿ ವಸ್ತುಗಳ ವಾಸನೆಯ ಗ್ರಹಿಕೆಯ ಮುಖಾಂತರ ಶ್ವಾನದಳದ ತಂಡ ಎಲ್ಲೆಡೆ ಹುಡುಕಾಟವನ್ನು ನಡೆಸಿ, ಅಲ್ಲದೇ ತಾಂತ್ರಿಕ ಉಪಕರಣಗಳ ಸಹಾಯದಿಂದ ಶೋಧ ಕಾರ್ಯವನ್ನು ಮುಂದುವರೆಸಿದ್ದು, ಯಾವುದಾದರೂ ಅಪಾಯಕಾರಿ ವಸ್ತುಗಳು ಕಂಡುಬಂದಲ್ಲಿ ಅವುಗಳನ್ನು ವಶಕ್ಕೆ ಪಡೆದುಕೊಂಡು ಅಥವಾ ಸ್ಫೋಟಕ ವಸ್ತುಗಳಿದ್ದಲ್ಲಿ ಅವುಗಳನ್ನು ನಿಷ್ಕ್ರಿಯಗೊಳಿಸಿ, ಸ್ಥಳಾಂತರಿಸುವ ನಿಟ್ಟಿನಲ್ಲಿ ತೀವ್ರ ಕಾರ್ಯಾಚರಣೆ ನಡೆಸಲಾಗುತ್ತದೆ.

**ಇದೀಗ ಆಂಬುಲೆನ್ಸ್ ಆಗಮನ:** ಈ ರೀತಿಯ ಅವಘಡಗಳು ಸಂಭವಿಸಿದಲ್ಲಿ ಅದೆಷ್ಟೋ ಅಮಾಯಕರು ಸಾವಿಗೀಡಾಗಿರುತ್ತಾರೆ. ಅಥವಾ ಗಂಭೀರವಾಗಿ ಗಾಯಗೊಂಡಿರುತ್ತಾರೆ, ಅಥವಾ ಜನರು ಸಾವು ಬದುಕಿನ ಮಧ್ಯೆ ಹೋರಾಡುತ್ತಿರುತ್ತಾರೆ. ಇಂತಹ ಸನ್ನಿವೇಶದಲ್ಲಿ ತುರ್ತು ಚಿಕಿತ್ಸೆ ಒದಗಿಸುವ ಸಲುವಾಗಿ ಆಂಬುಲೆನ್ಸ್ ಸ್ಥಳಕ್ಕೆ ಧಾವಿಸಿ ವೈದ್ಯಕೀಯ ಚಿಕಿತ್ಸೆಗಾಗಿ ಏರ್ಪಾಡು ಮಾಡಬೇಕು. ವೈದ್ಯೋ ನಾರಾಯಣೋ ಹರಿ ಎನ್ನುವಂತೆ ವೈದ್ಯರ ಸೇವೆ ಇಂತಹ ಸಂದರ್ಭಗಳಲ್ಲಿ ಅತ್ಯಂತ ಮಹತ್ವದ್ದಾಗಿದ್ದು, ಗಾಯಗೊಂಡಿದ್ದವರನ್ನೆಲ್ಲ ರಕ್ಷಿಸಿ ಹೆಚ್ಚಿನ ಚಿಕಿತ್ಸೆಗಾಗಿ ಸ್ಥಳಾಂತರಿಸುವ ಕಾರ್ಯ ಮಾಡಬೇಕು.

**ಅಗ್ನಿಶಾಮಕ ದಳದ ಆಗಮನ:** ಅನಿರೀಕ್ಷಿತ ಸ್ಫೋಟದಿಂದಾಗಿ ಮಹಾನಗರ ಪಾಲಿಕೆಯ ಕಟ್ಟಡಕ್ಕೆ ಬೆಂಕಿ ಹೊತ್ತಿಕೊಂಡಿದ್ದು, ಇದರಿಂದ ಸಾರ್ವಜನಿಕರನ್ನು ರಕ್ಷಿಸಲು ಅಗ್ನಿಶಾಮಕ ದಳ ಆಗಮಿಸಿದ್ದು ಆದಷ್ಟು ಬೇಗನೇ ಬೆಂಕಿಯನ್ನು ನಂದಿಸಲು ಕಾರ್ಯ ಪ್ರವೃತ್ತರಾಗಿ ಅತ್ಯಂತ ಚಾಕಚಕ್ಯತೆಯಿಂದ ಕರ್ತವ್ಯವನ್ನು ನಿರ್ವಹಿಸಬೇಕು. ಕಟ್ಟಡಕ್ಕೆ ಹೊತ್ತಿಕೊಂಡಿರುವ ಅಗ್ನಿಯನ್ನು ಆರಿಸುವುದು ಮಾತ್ರವಲ್ಲದೇ, ಈ ಅಗ್ನಿ ಅವಘಡದಿಂದ ತೊಂದರೆಗೊಳಗಾಗಿರುವ ನಾಗರೀಕರ ರಕ್ಷಣೆಯ ಜವಾಬ್ದಾರಿ ಯನ್ನು ಹೊತ್ತುಕೊಂಡು, ಹೆಚ್ಚಿನ ಪ್ರಾಣಹಾನಿಯಾಗದಂತೆ ಗಾಯಾಳುಗಳನ್ನು ಸ್ಥಳಾಂತರಿಸಬೇಕು.

ಅಗ್ನಿಶಾಮಕ ದಳದ ಈ ರಕ್ಷಣಾ ಕಾರ್ಯಕ್ಕೆ ಗೃಹರಕ್ಷಕ ದಳ, ಎನ್.ಸಿ.ಸಿ ಮತ್ತು ಸೌಟ್ಸ್ & ಗೈಡ್ಸ್ ಸಂಸ್ಥೆಗಳ ಸ್ವಯಂ ಸೇವಕರು ಸಹ ಸಾಥ್ ನೀಡುತ್ತಿದ್ದು, ದಾಳಿಗೀಡಾದವರನ್ನು ಶೀಘ್ರವಾಗಿ ಸ್ಥಳಾಂತರ ಮಾಡುತ್ತಿರುವ ಸನ್ನಿವೇಶ ಇದೀಗ ಅಗ್ನಿಶಾಮಕ ದಳದವರು ಕಟ್ಟಡಕ್ಕೆ ಹೊತ್ತಿಕೊಂಡಿದ್ದ ಬೆಂಕಿಯನ್ನು ಆರಿಸುವಲ್ಲಿ ಯಶಸ್ವಿಯಾಗಿದ್ದಾರೆ. ಇವರ ಈ ತುರ್ತು ಸ್ಪಂದನಾ ಕಾರ್ಯಕ್ಕೆ ಎಲ್ಲರೂ ಜೋರಾದ ಚಪ್ಪಾಳೆಯೊಂದಿಗೆ ಅಭಿನಂದಿಸೋಣ.

ಎಸ್.ಡಿ.ಆರ್.ಎಫ್ ತಂಡದ ಆಗಮನ: ರಾಜ್ಯ ವಿಪತ್ತು ಸ್ಪಂದನಾ ಪಡೆ ಇದೀಗ ಘಟನಾ ಸ್ಥಳಕ್ಕೆ ಧಾವಿಸಿದ್ದು, ಈ ಕಟ್ಟಡದ ಅವಶೇಷಗಳಲ್ಲಿ ಸಿಲುಕಿಕೊಂಡಿರುವ ಸಾರ್ವಜನಿಕರನ್ನು ರಕ್ಷಿಸುವ ಸಲುವಾಗಿ, ಹಾಗೂ ಸಂರಕ್ಷಿಸಲು ಸಾಧ್ಯವಾಗದ ಸ್ಥಳದಲ್ಲಿ ಸಿಲುಕಿಕೊಂಡಿರುವ ಜನರನ್ನು ರಕ್ಷಿಸಲು ಇದೀಗ ಗೋಡೆಯನ್ನು ಕೊರೆದು, ತುರ್ತಾಗಿ ಹೊಸ ಮಾರ್ಗವನ್ನು ಸೃಷ್ಟಿಸಬೇಕು. ಸಾಮಾನ್ಯ ಜನರು ತಲುಪಲು ಸಾಧ್ಯವಾಗದಂತಹ ಸಂದರ್ಭದಲ್ಲಿ ಭರವಸೆಯ ಬೆಳಕಾಗಿ ಬಂದು ನೆರವಾಗಿರುವುದು ನಮ್ಮ ಕರ್ನಾಟಕ ರಾಜ್ಯ ವಿಪತ್ತು ಸ್ಪಂದನಾ ಪಡೆ. ತನ್ನ ವಿಶೇಷ ಕಾರ್ಯಕ್ಷಮತೆಯನ್ನು ಪ್ರದರ್ಶಿಸಿ ಸಂಕಷ್ಟದಲ್ಲಿದ್ದ ಸಾರ್ವಜನಿಕರ ರಕ್ಷಣೆ ಮಾಡಿ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ.

ವಿಧಿವಿಜ್ಞಾನ ಪ್ರಯೋಗಾಲಯ ಹಾಗೂ ಸೋಕೋ ಸೀನ್ ಆಫ್ ಕ್ರೈಮ್ ಆಫೀಸರ್ ಗಳ ಆಗಮನ: ಘಟನಾ ಸ್ಥಳದಲ್ಲಿ ಲಭ್ಯವಿರುವ ಅಪಾಯಕಾರಿ ಸ್ಫೋಟಕ ವಸ್ತುಗಳ ಮಾದರಿಯನ್ನು ಸಂಗ್ರಹಿಸುವ ಕೆಲಸದಲ್ಲಿ ತೊಡಗಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ವಿವಿಧ ರೀತಿಯ ಸಾಕ್ಷ್ಯಗಳನ್ನು ಸಂಗ್ರಹಣೆ ಮಾಡಿ, ಈ ದುಷ್ಕೃತ್ಯದ ಹಿಂದಿನ ಸೂತ್ರಧಾರಿಗಳ ಪತ್ತೆ ಹಚ್ಚಲು ನೆರವಾಗುವುದಲ್ಲದೇ, ಈ ರೀತಿಯ ಘಟನೆಗಳು ಮರುಕಳಿಸದಂತೆ ಎಚ್ಚರವಹಿಸಲು ಸ್ಥಳದಲ್ಲಿ ಸಿಗುವ ಸೂಕ್ಷ್ಮ, ಸಾಕ್ಷ್ಯಾಧಾರಗಳು ಪ್ರಮುಖ ಪಾತ್ರ ವಹಿಸುತ್ತದೆ.

ವಿಧ್ವಂಸವಾಗಿದ್ದ ಕಟ್ಟಡದ ಸುತ್ತಮುತ್ತಲಿನ ಪ್ರದೇಶವನ್ನು ಸಂರಕ್ಷಿಸಿ, ಪುನರ್ ನಿರ್ಮಿಸಿ, ಸ್ವಚ್ಛವಾಗಿ, ಸುಂದರವಾಗಿಡಲು ಇದೀಗ ಮಹಾನಗರ ಪಾಲಿಕೆಯ ಪೌರ ಕಾರ್ಮಿಕರ ತಂಡ ಆಗಮಿಸಿ ತನ್ನ ಕಾಯಕವನ್ನು ಪ್ರಾರಂಭಿಸಿದೆ. ಸ್ವಚ್ಛ ಸುಂದರ ಪರಿಸರದ ನಿರ್ಮಾಣದಲ್ಲಿ ಅತ್ಯಂತ ಮಹತ್ವದ ಪಾತ್ರ ವಹಿಸುವ ಪೌರ ಕಾರ್ಮಿಕರು, ಸದಾ ಎಲೆಮರೆಯ ಕಾಯಿಯಂತೆ ತಮ್ಮ ಕಾರ್ಯವನ್ನು ನಿರ್ವಹಿಸಿ ನಮ್ಮೆಲ್ಲರಿಗಾಗಿ ಅಚ್ಚುಕಟ್ಟಾದ ಶುಚಿಯಾದ ನಗರವನ್ನು ನಿರ್ಮಿಸಿ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದ್ದಾರೆ. ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸುರೇಶ್.ಬಿ.ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಪಾಲಿಕೆ ಆಯುಕ್ತೆ ರೇಣುಕ, ಬೆಸ್ಕಾಂ, ಆರೋಗ್ಯ ಇಲಾಖೆ, ಅಗ್ನಿಶಾಮಕ ದಳ, ವಿಪತ್ತು ಸ್ಪಂದನಾ ಪಡೆ, ಗೃಹ ರಕ್ಷಕ ಪಡೆ, ಎನ್.ಸಿ.ಸಿ ಮತ್ತು ಸೌಟ್ಸ್ & ಗೈಡ್ಸ್, ಪೌರ ಕಾರ್ಮಿಕರು ಹಾಗೂ ವಿವಿಧ ಇಲಾಖೆಗಳ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಮತ್ತೊಮ್ಮೆ ತಾಲ್ಲೂಕಿನಾದ್ಯಂತ ಸಮೃದ್ಧ ಕೃತಿಕ ಮಳೆ

## ನಗರಂಗೆರೆ ಅಂಡರ್‌ಪಾಸ್‌ನಲ್ಲಿ ನೀರು ನಿಂತು ಸಾರ್ವಜನಿಕರ ಪರದಾಟ: ಕೆರೆಯಾದಂತಾದ ರಸ್ತೆಗಳು

» **ಚಳ್ಳಕೆರೆ**

ತಾಲ್ಲೂಕಿನಾದ್ಯಂತ ಶನಿವಾರ ರಾತ್ರಿ ಉತ್ತಮ ಮಳೆಯಾಗಿದ್ದು ಒಂದೇ ವಾರದಲ್ಲಿ ಬಂದ ಎರಡನೇ ಹದಮಳೆಯಾಗಿದೆ. ತಾಲ್ಲೂಕಿನಾದ್ಯಂತ 161.016 ಎಂ.ಎಂ. ಒಟ್ಟು ಇದುವರೆಗೂ ಕೇವಲ ಆರು ತಿಂಗಳ ಅವಧಿಯಲ್ಲಿ 269.14 ಎಂ.ಎಂ. ಮಳೆಯಾಗಿದೆ.

ನಾಯಕನಹಟ್ಟಿ 52.04, ಚಳ್ಳಕೆರೆ–49.00, ತಳಕು–36.04, ದೇವರಮರಿಕುಂಟೆ–17.04, ಪರಶುರಾಮಪುರ–07.04 ಮಳೆಯಾಗಿದೆ. ನಗರದಾದ್ಯಂತ ಬೆಂಗಳೂರು ರಸ್ತೆ, ಚಿತ್ರದುರ್ಗ ರಸ್ತೆಯ ಖಾಸಗಿಬಸ್ಟಾಂಡ್, ಹಳೇವಾಟರ್ ಟ್ಯಾಂಕ್ ರಸ್ತೆ, ವಾಲ್ಮೀಕಿ ನಗರದ ಮುಖ್ಯರಸ್ತೆ ಮುಂತಾದ ಕಡೆಗಳಲ್ಲಿ ಮಳೆ ನೀರು ರಸ್ತೆಯ ಮೇಲೆ ನಿಂತು ಕೆಲಹೊತ್ತು ವಾಹನ ಹಾಗೂ ಜನಸಂಚಾರಕ್ಕೆ ಅಡ್ಡಿಯಾಗಿತ್ತು. ನಗರದ




ಪ್ರಮುಖ ರಸ್ತೆ ಸಣ್ಣ ಮಳೆಗೂ ನೀರು ನಿಂತು ಕೆರೆಯಂತಾಗುತ್ತವೆ. ಅವೈಜ್ಞಾನಿಕ ರಸ್ತೆ ನಿರ್ಮಾಣವೇ ಇದಕ್ಕೆ ಕಾರಣವೆಂದು ಸಾರ್ವಜನಿಕರು ಆರೋಪಿಸುತ್ತಿದ್ದಾರೆ. ನಗರದ ಬೆಂಗಳೂರು ರಸ್ತೆಯ ವೃತ್ತ ನಿರೀಕ್ಷಕ ಕಚೇರಿ ಮುಂಭಾಗದಲ್ಲೂ ಸಹ ಚರಂಡಿ ಮೂಲಕ ಹರಿಯದ ನೀರು ದುರಸ್ಥಿ ಕಾರಣ ರಸ್ತೆಯ ಮೇಲೆ ಎಲ್ಲಂದರಲ್ಲೇ ಹರಿದ ಪರಿಣಾಮ ರಸ್ತೆ ಸಣ್ಣ ಕೆರೆಯಾಗಿ ಪರಿಣಮಿಸಿತ್ತು. ಇಲ್ಲೂ ಸಹ ವಾಹನ ಸಂಚಾರ ಕೆಲಹೊತ್ತು ಪರದಾಡಿದರು. ಸ್ಥಳೀಯ ನಿವಾಸಿಗಳು ನೂತನವಾಗಿ ನಿರ್ಮಿಸುತ್ತಿರುವ ಚರಂಡಿ ಕಾಮಗಾರಿಯನ್ನು ಪೂರ್ಣಗೊಳಿಸದೆ ಇದಿದ್ದು ಸಾರ್ವಜನಿಕರ ಅಸಮದಾನಕ್ಕೆ ಕಾರಣವಾಯಿತು.

ನಗರಂಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸುಮಾರು ಹತ್ತಿಪ್ಪತ್ತು ಹಳ್ಳಿಗಳನ್ನು ಸಂಪರ್ಕಿಸುವ ರಸ್ತೆಯ ರೈಲ್ವೆ ಅಂಡರ್‌ಪಾಸ್‌ನಲ್ಲಿ ಮಳೆ ನೀರು ನಿಂತು ವಾಹನ ಹಾಗೂ ಜನರ ಸಂಚಾರಕ್ಕೆ ಅಡ್ಡಿಯಾಗಿತ್ತು. ರೈಲ್ವೆ ಅಂಡರ್‌ಪಾಸ್ ಕೆಳಗೆ ನಿಂತ ನೀರನ್ನು ಮೇಲೆತ್ತಲು ಸಂಬಂಧಪಟ್ಟ ಅಧಿಕಾರಿಗಳು ಗಮನಹರಿಸಬೇಕೆಂದು ವಾಹನ ಸವಾರರು, ಸ್ಥಳೀಯರು ಆಗ್ರಹಿಸಿದರು.




**ಚಳ್ಳಕೆರೆ ನಗರದ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಡೆದ ಪದವಿಪ್ರಧಾನ ಸಮಾರಂಭದಲ್ಲಿ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ವಿದ್ಯಾರ್ಥಿನಿ ಎಂ. ರಕ್ಷಾಗೆ ಪದವಿಪ್ರಧಾನ ಮಾಡಿ ಅಭಿನಂದಿಸಿದರು.**




**ಚಳ್ಳಕೆರೆ ನಗರದ ರೋಟರಿ ಕ್ಲಬ್‌ನಲ್ಲಿ ರೋಟರಿ ಮಾಕಂಸ್ ಪ್ರೌಢಶಾಲೆ ಹೆಚ್ಚು ಅಂಕ ಪಡೆದ ಸಿ.ಆರ್.ಮೇಘನರವರನ್ನು ಸನ್ಮಾನಿಸಲಾಯಿತು.**

## ಪ್ರಮುಖ ಸುದ್ದಿ

# ಮುಂಗಾರು ಮಳೆ ಹೊಳಲ್ಕೆರೆ ತಾಲೂಕಿನಲ್ಲಿ ಉತ್ತಮ ಆರಂಭ

» **ಎಸ್.ವೇದಮೂರ್ತಿ ಹೊಳಲ್ಕೆರೆ.**







ಮುಂಗಾರು ಹಂಗಾಮು ಮಳೆ ತಾಲೂಕಿನಲ್ಲಿ ಉತ್ತಮ ಆರಂಭ ನೀಡಿದೆ. ಶನಿವಾರ ರಾತ್ರಿ ಸುರಿದ ಧಾರಕಾರ ಮಳೆಗೆ ಹಳ್ಳಕೊಳ್ಳಗಳು ಭರ್ತಿಯಾಗಿ ಹರಿಯುತ್ತಿವೆ. ಕೆರೆ ಕಟ್ಟೆಗಳಿಗೆ ನೀರು ಬರಪೂರವಾಗಿ ಹರಿದು ಬರುತ್ತಿವೆ. ಹಾಗಾಗಿ ಕೆರೆಕಟ್ಟೆ ತಂಗ್ಗ ಪ್ರದೇಶದಲ್ಲಿ ನೀರಿನ ಸಂಗ್ರಹ ಕಂಡು ಬಂದಿದ್ದು, ಕುಸಿಯುತ್ತಿದ್ದ ಅಂತರ್ಜಲ ಪ್ರಮಾಣ ಗಣನೀಯವಾಗಿ ಹೆರಿಕೆಗೆ ಸಹಾಕಾರಿಯಾಗಿದೆ.

**ಭಿತ್ತನೆಗೆ ಸಿದ್ಧತೆ** : ತಾಲೂಕಿನಲ್ಲಿ ಉತ್ತಮ ಮಳೆ ಹಿನ್ನೇಲೆಯಲ್ಲಿ ರೈತರು ಸಂತಸಗೊಂಡಿದ್ದಾರೆ. ಮುಂಗಾರು ಹಂಗಾಮು ಭರ್ಜರಿ ಮುನ್ಸೂಚನೆ ತೋರಿಸಿದ್ದರಿಂದ ಹೊಲಗಳಲ್ಲಿ ಮಳೆಯ ನೀರು ಹಿಂಗಿ ಹದಗೊಂಡಿವೆ. ಹಾಗಾಗಿ ಬೀಜ ಭಿತ್ತನೆಗೆ ಬೇಕಾದ ಕೃಷಿ ಕಾಯಕಕ್ಕೆ ಬರಪೂರವಾಗಿ ತಯಾರಿ ನಡೆಸಿದ್ದಾರೆ. ಈಗ ಭಿತ್ತನೆಗೆ ಪ್ರಶಸ್ತ ಕಾಲವಾಗಿದ್ದರಿಂದ ಮುಸುಕಿನ ಜೋಳ, ಹತ್ತಿ, ದ್ವೀದಳ ದಾನ್ಯ, ಅಕಡಿ ಬೀಜ ಭಿತ್ತನೆಗೆ ಅರಂಭಿಸಿದ್ದಾರೆ. ಇನ್ನು ಕೆಲ ರೈತರು ಇನ್ನು ಹೊಲಗಳನ್ನು ಹದ ಮಾಡಿಕೊಂಡಿಲ್ಲ. ಕೆಲ ರೈತರು ಭಿತ್ತನೆಗೆ ಚಾಲನೆ ನೀಡಿದ್ದು, ಮಾರುಕಟ್ಟೆಯಲ್ಲಿ ಬೀಜ ಗೊಬ್ಬರ ಖರೀಸಿಲು ಒತ್ತು ನೀಡಿದ್ದಾರೆ. ಅದರೇ ಮಾರುಕಟ್ಟೆ ರೈತರಿಗೆ ಬೇಕಾದ ಬೀತ್ತನೆ ಬೀಜ ಮತ್ತು ಗೊಬ್ಬರ ಸಮಸ್ಯೆ ಕಂಡು ಬರುತ್ತಿದೆ. ರೈತರು ಬೀಜ ಗೊಬ್ಬರ ಖರೀದಿಸಲು ಮುಗಿ ಬಿದ್ದ ಹಿನ್ನಲೆಯಲ್ಲಿ ದಾಸ್ತಾನು ಖಾಲಿಯಾಗಿ ಬೀಜ ಗೊಬ್ಬರ ಸದಸ್ಯೆ ಎದುಸುವ ಸಾಧ್ಯತೆ ಇದ್ದು, ಹಾಗಾಗಿ ಕಾಳ ಸಂತೆಯಲ್ಲಿ ಬೀಜ ಗೊಬ್ಬರ ಮಾರಾಟ ತಡೆಗಟ್ಟಲು ಕೃಷಿ ಇಲಾಖೆ ಸಕಾಲಕ್ಕೆ ಬೀಜ ಗೊಬ್ಬರ ಪೂರೈಕೆ ಕ್ರಮ ವಹಿಸಬೇಕಿದೆ.

**ತೋಟಗಾರಿ ಬೆಳೆಗೆ ಸಹಾಕಾರಿ** : ಶನಿವಾರ ಸುರಿದ ಮಳೆ ತೊಟಗಾರಿಕೆ ಬೆಳೆಗಳಿಗೆ ತುಂಬ ಸಹಕಾರಿಯಾಗಿದೆ. ಒಂದೇರಡು ತಿಂಗಳಿಂದ ನೀರಿಲ್ಲದೆ ಅಡಿಕೆ ತೆಂಗು ತೋಟಗಳು ಒಣಗುವ ಹಂತಕ್ಕೆ ಬಂದಿದ್ದು, ಕಂಗಾಲಾಗಿದ್ದ ತೋಟಗಾರಿಕಾ ಬೆಳೆಗಾರರಿಗೆ ಮಳೆ ಜೀವನ ಕಳೆ ತಂದಿದೆ. ಇನ್ನು ಉತ್ತಮ ಮಳೆಯಿಂದ ಹಲವಾರು ತೋಟಗಳಲ್ಲಿ ಭರಪೂರ ನೀರು ಸಂಗ್ರಹವಾಗಿದ್ದು, ಉತ್ತಮ ಹಸಿಯಾಗಿದೆ. ಅಡಿಕೆ, ತೆಂಗು, ಬಾಳೆ ಇಳುವರಿಗೆ ಹೆಚ್ಚಾಗಲು ಮಳೆ ಹೆಚ್ಚು ಸಹಕಾರಿಯಾಗಿದೆ.

**ಹರಿದು ಬರುತ್ತಿರುವ ನೀರು** : ಶನಿವಾರ ಸುರಿದ ಭಾರಿ ಮಳೆಗೆ ತಾಲೂಕಿನ ಹಲವಾರು ಹಳ್ಳಗಳು ದುಮ್ಮಿಕ್ಕಿ ಹರಿದು ಬರುತ್ತಿವೆ. ಹಾಗಾಗಿ ಕೆರೆ ಕಟ್ಟೆಗಳಲ್ಲಿ ನೀರು ಸಂಗ್ರಹವಾಗುತ್ತಿದೆ. ಹೊಳಲ್ಕೆರೆ ತಾಲೂಕಿನ ಕುಡಿನೀರುಕಟ್ಟೆ ಕೆರೆ ಕೋಡಿ ಬಿದ್ದಿದ್ದು, ಇನ್ನು ಸಣ್ಣಪುಟ್ಟ ಹಲವರು ಕೆರೆಗಳು ಕೋಡಿಯಿಂದ ನೀರು ಹರಿಯುತ್ತಿವೆ. ಗುಡ್ಡಗಾಡು ಪ್ರದೇಶದಲ್ಲಿ ಸರಕಾರ ನಿರ್ಮಿಸಿದ ಚಕ್ ಡ್ಯಾಮ್‌ಗಳಲ್ಲಿ ಬರಪೂರ ನೀರು ಸಂಗ್ರಹವಾಗಿದ್ದು, ಅಂತರ್ಜಲ ಮರು ಪೂರಕವಾಗುತ್ತಿದೆ.

**ಮುಳುಗಡೆಯಾಗ ರೈಲ್ವೆ ಅಂಡರ್ ಪಾಸ್ ಬಂದ್:** ತಾಲೂಕಿನಲ್ಲಿ ಹಾದು ಹೋಗಿರುವ ರೈಲ್ವೆ ಹಳಿಗಳ ಸೇತುವೆಯ ಅಂಡರ್ ಪಾಸ್‌ಗಳಲ್ಲಿ ನೀರು ಸಂಗ್ರಹದ ಹಿನ್ನಲೆಯಲ್ಲಿ ಸಾಕಷ್ಟು ಹಳ್ಳಿಗಳ ಸಂಚಾರ ಬಂದ್ ಅಗಿದೆ. ಕೋಟೆಹಾಳ್ ಅಂಡರ್ ಪಾಸ್‌ನಲ್ಲಿ ನೀರು ನಿಂತು ಕೋಟೆಹಾಳ್, ಎಮ್ಮಿಗನೂರು, ಅಂತಾಪುರ, ಹಿರೆ ಎಮ್ಮಿಗನೂರು, ಕಾಮನಹಳ್ಳಿ, ಕೋಡಗವಳ್ಳಿ, ಹಾಗೂ ಹಟ್ಟಿ, ನಂದಿಹಳ್ಳಿ ಸೇರಿ ಹಲವಾರು ಗ್ರಾಮಗಳ ಸಂಚಾಕ್ಕೆ ಧಕ್ಕೆಯಾಗಿದೆ. ಪೂಣಜೂರು ಹತ್ತಿರ ರೈಲ್ವೆ ಅಂಡರ್ ಪಾಸ್‌ನಲ್ಲಿ ನೀರು ನಿಂತ ಪರಿಣಾಮ ಉಳೆಮಳಲಿ ಸೇರಿ ಸುತ್ತಮುತ್ತಲ ಹತ್ತಾರು ಗ್ರಾಮದ ಜನರ ಸಂಚಾರ ನಿಂತು ಹೊಗಿದೆ. ಅಮೃತಾಪುರ, ಹನುಮನಕಟ್ಟೆ, ರಾಮಗಿರಿ ಗುಂಡೇರಿ ರೈಲ್ವೆ ಅಂಡರ್ ಪಾಸ್‌ಗಳ ರಸ್ತೆಗಳು ನೀರಿನಲ್ಲಿ ಮುಳುಗಿ ಊರು,ಕೆರೆ,ಹೊಲ ಗದ್ದೆ ತೋಟಗಳಿಗೆ ಸಂಚರಿಸದಂತ ಸ್ಥಿತಿ ಯಿಂದ ಜನರು ಪರದಾಡುತ್ತಿದ್ದಾರೆ.

**ಒಂದಿಷ್ಟು ಹಾನಿ:** ಭಾರಿ ಮಳೆಗೆ ತಾಲೂಕಿನಲ್ಲಿ ಸಾಕಷ್ಟು ಮನೆಗಳ ಗೋಡೆಗಳು ಕುಸಿದು ಬಿದ್ದಿವೆ. ಯಾವುದೇ ಸಾವು ನೋವು ಕಂಡು ಬಂದಿಲ್ಲ. ಮಳೆ ಜತೆ ಗಾಳಿ ಬೀಸಿದ್ದರಿಂದ ತೋಟಗಳಲ್ಲಿ ಅಡಿಕೆ ಮರಳು ಮುರಿದು ಬಿದ್ದಿದ್ದು ರೈತರಿಗೆ ಒಂದಿಷ್ಟು ನಷ್ಟ ಉಂಟಾಗಿದೆ.



ಮಣ್ಣಿನ ಮಗ, ಮಾಜಿ ಪ್ರಧಾನಿ,

# ಶ್ರೀ.ಎಚ್.ಡಿ.ದೇವೇಗೌಡ

## 93, ನಾಟ್ ಔಟ್, ಅವರು ಶತಕವನ್ನು ಬಾರಿಸಲಿ ಎಂದು ಹಾರೈಸುತ್ತಾ........

ಕರ್ನಾಟಕ ರಾಜ್ಯದ, ಹಾಸನ ಜಿಲ್ಲೆಯ, ಹೊಳೆನರಸೀಪುರ ತಾಲ್ಲೂಕಿನ, ಹರದನಹಳ್ಳಿಯ ಸಾಮಾನ್ಯ ರೈತ ಕುಟುಂಬದ ವ್ಯಕ್ತಿಯೊಬ್ಬರು ಬೃಹತ್ ಭಾರತದ ಪ್ರಧಾನಿಯಾಗಿ ಅಧಿಕಾರಕ್ಕೆ ಏರುವುದು ಎಷ್ಟು ಸೋಜಿಗವೋ, ದೇವೇಗೌಡರ ವ್ಯಕ್ತಿತ್ವವನ್ನು ವಿಮರ್ಶೆಗೆ ಒಳಪಡಿಸುವುದು ಸಹ ಅಷ್ಟೇ ಸಂಕೀರ್ಣ........


ಕೆಲವು ಪದ ವಿಶೇಷಣಗಳನ್ನು ಬಳಸಿ ಅವರ ಸಾಧನೆಗಳನ್ನು ವರ್ಣಿಸುವುದು ಒಂದು ಮುಖವಾದರೆ, ಅಷ್ಟೇ ಕೆಟ್ಟ ಪದ ವಿಶೇಷಣಗಳನ್ನು ಬಳಸಿ ಅವರನ್ನು ಟೀಕಿಸಲೂಬಹುದು. ಅದು ಇನ್ನೊಂದು ಮುಖ. ಅವಿರತ ಶ್ರಮದ, ರಾಜಕೀಯ ಚಾಣಾಕ್ಷತೆಯ, ದಕ್ಷ ಆಡಳಿತದ ಮೂಲಕ ಉನ್ನತ ಸ್ಥಾನಕ್ಕೇರಿ ಹೆಸರು ಗಳಿಸಿರುವಂತೆ, ಅಷ್ಟೇ ಸಣ್ಣತನದ, ಜಾತಿ ರಾಜಕೀಯದ, ಕುಟುಂಬ ರಾಜಕೀಯದ, ಒಡೆದಾಡುವ ರಾಜಕೀಯ ನೀತಿ, ವಿರೋಧಿಗಳನ್ನು ತುಳಿಯುವುದು ಹೀಗೆ ವೈರುಧ್ಯಗಳ ವ್ಯಕ್ತಿತ್ವವನ್ನು ಹೊಂದಿದ್ದಾರೆ......

ಸುಮಾರು 60 ವರ್ಷಗಳ ಅವರ ದೀರ್ಘ ರಾಜಕೀಯ ಜೀವನ ಘಟನೆಗಳನ್ನು, ಸೋಲು ಗೆಲುವುಗಳನ್ನು, ಒಡನಾಟಗಳನ್ನು, ವಿರೋಧಗಳನ್ನು, ಪ್ರತಿಭಟನೆಗಳನ್ನು, ಬಿಡಿಬಿಡಿಯಾಗಿ ಪೋಣಿಸುತ್ತಾ ಹೋದರೆ ಒಂದು ಕಡೆ ಒಳ್ಳೆಯ ಅಂಶಗಳ, ಇನ್ನೊಂದು ಕಡೆ ಕೆಟ್ಟ ಗುಣಲಕ್ಷಣಗಳ, ಒಂದು ಸರಮಾಲೆಯೇ ಸಿಗುತ್ತದೆ. ಅವರ ಅಭಿಮಾನಿಗಳಿಗೆ ಒಂದು ಹಾರ, ಅವರ ವಿರೋಧಿಗಳಿಗೆ ಇನ್ನೊಂದು ಹಾರ ಸಿದ್ದವಾಗುತ್ತದೆ. ವಿಮರ್ಶಕರಿಗೆ ಈ ಎರಡರ ನಡುವಿನ ಕೊರಳಿನ ಸಹಜತೆಯನ್ನು ಹುಡುಕುವುದೇ ಒಂದು ಸವಾಲು.....

ಇರಲಿ, ಈ ಎಲ್ಲದರ ನಡುವೆ ನಮ್ಮದು ಒಂದು ಅಭಿಪ್ರಾಯ, ಅನಿಸಿಕೆ ದಾಖಲಾಗಲಿ.....

**ಮೊದಲನೆಯದಾಗಿ,**

93 ವರ್ಷಗಳ ದೈಹಿಕ ಆರೋಗ್ಯವನ್ನು, ಮಾನಸಿಕ ಸ್ಥಿಮಿತತೆಯನ್ನು, ರಾಜಕೀಯ



ಜೀವನವನ್ನು, ಈಗಲೂ ತಮ್ಮ ಪ್ರಸ್ತುತತೆಯನ್ನು ಉಳಿಸಿಕೊಂಡಿರುವುದು ಅವರ ಬಹುದೊಡ್ಡ ಸಾಧನೆ ಎಂದೇ ಹೇಳಬೇಕಾಗುತ್ತದೆ. ಸಾಮಾನ್ಯ ಒತ್ತಡವನ್ನು ತಾಳಲಾಗದೆ ಅನೇಕ ಕಾಯಿಲೆಗಳಿಗೆ ತುತ್ತಾಗುವ ನಾವು ರಾಜಕೀಯದ ಬಹುದೊಡ್ಡ ಏಳು ಬೀಳುಗಳ ಸಮಯದಲ್ಲಿಯೂ, ದೇಹ ಆರೋಗ್ಯವನ್ನು ಕಾಪಾಡಿಕೊಂಡು, ಚಾಣಾಕ್ಷ ನಡೆಗಳನ್ನು ಮುನ್ನಡೆಸುತ್ತಾ, ನೋವು ಅವಮಾನಗಳನ್ನು ಸಹಿಸಿಕೊಳ್ಳುತ್ತಾ, ಸೈದ್ಧಾಂತಿಕ ವೈರುಧ್ಯಗಳ ನಡುವೆ ಸಿಕ್ಕಿಬೀಳುತ್ತಾ, ತನ್ನ ವರ್ಚಸ್ಸನ್ನು ಕಾಪಾಡಿಕೊಳ್ಳುತ್ತಾ, ಮುನ್ನಡೆಯುತ್ತಿರುವುದರಲ್ಲಿಯೇ ವ್ಯಕ್ತಿಯೊಬ್ಬನ ಯಶಸ್ಸನ್ನು ಗುರುತಿಸಬಹುದು......

**ಎರಡನೆಯದಾಗಿ,**

ಕಾಲಕ್ಕೆ, ಪರಿಸ್ಥಿತಿಗೆ ತಕ್ಕಂತೆ, ರಾಜಕೀಯ ನಡೆಗಳನ್ನು ನಡೆಸುವಲ್ಲಿ ಅತ್ಯಂತ ನಿಖರ, ನಿಯಂತ್ರಿತ ದಾಳಗಳನ್ನು ಉರುಳಿಸುವಲ್ಲಿ ಕರ್ನಾಟಕದ ರಾಜಕೀಯದಲ್ಲಿ ಬಹುಶಃ ದೇವೇಗೌಡರಿಗೆ ಮೊದಲನೆಯ ಸ್ಥಾನವೇ ಸಿಗಬಹುದು. ಅದೊಂದು ಹುಟ್ಟಿನಿಂದಲೇ ಬಂದ ಸ್ವಾಭಾವಿಕ ಗುಣ ವಿಶೇಷವೇ ಇರಬೇಕು. ಕೆಲವರಿಗೆ, ಕೆಲವು ಕ್ಷೇತ್ರಗಳಲ್ಲಿ ಸಹಜವಾಗಿಯೇ ಕೆಲವು ಸಾಮರ್ಥ್ಯಗಳು ಮೈಗೂಡಿರುತ್ತವೆ. ದೇವೇಗೌಡರಿಗೆ ರಾಜಕೀಯ ನಡೆಗಳು ತುಂಬಾ ನಿರೀಕ್ಷಿತ ಮತ್ತು ಅನುಕೂಲಕರ ಫಲಿತಾಂಶಗಳನ್ನೇ ನೀಡಿದೆ. ಅದರಲ್ಲಿ ಅವರು ಎತ್ತಿದ ಕೈ ಎಂದು ಹೇಳಬಹುದು.....

ಮೂರನೆಯದಾಗಿ, ರಾಜಕೀಯ ತಾಳ್ಮೆ, ಅವಕಾಶವಾದಿತನದ ಸದುಪಯೋಗ, ಕಾದು ಹೊಡೆಯುವ ತಂತ್ರಗಾರಿಕೆ, ಒಬ್ಬರ ವಿರುದ್ಧ ಮತ್ತೊಬ್ಬರನ್ನು ಬೆಳೆಸುವ ದೂರ ದೃಷ್ಟಿ, ಸ್ವಾರ್ಥಕ್ಕಾಗಿ ಎಷ್ಟೇ ಕೆಳಹಂತಕ್ಕೂ ಇಳಿಯುವ ಮಾನಸಿಕ ಸ್ಥಿತಿ ಎಲ್ಲದರಲ್ಲೂ ಅವರು ಹೆಚ್ಚು ನಿಯಂತ್ರಣ ಹೊಂದಿದ್ದಾರೆ. ಇದು ರಾಜಕೀಯದಲ್ಲಿ ಬಹು ಮುಖ್ಯ ಪಾತ್ರ ವಹಿಸುತ್ತದೆ. ಮಾನ ಅಪಮಾನವನ್ನು ಲೆಕ್ಕಿಸದೆ, ವಿಷಯವನ್ನು ಗೊಂದಲಗೊಳಿಸಿ, ಭಂಡತನದಿಂದ ತನ್ನ ಕಾರ್ಯ ಸಾಧಿಸುವ, ಎಲ್ಲವನ್ನು ಸಮರ್ಥಿಸಿಕೊಳ್ಳುವ, ಸಮಯಕ್ಕೆ ತಕ್ಕ ಉತ್ತರಗಳನ್ನೇ ಬಳಸಿಕೊಳ್ಳುವ ಸಾಮರ್ಥ್ಯವು ಅವರಿಗಿದೆ.....

ತನ್ನ ಬಹುಕಾಲದ ಕಟ್ಟಾ ವಿರೋಧಿಗಳು ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವಾಗ, ತನ್ನ ನೇತೃತ್ವದ ಪಕ್ಷ ಅಸ್ತಿತ್ವ ಉಳಿಸಿಕೊಳ್ಳಲು ಒದ್ದಾಡುತ್ತಿರುವಾಗ, ತನ್ನ ಮೊಮ್ಮಗನ ಭಯಂಕರ ಲೈಂಗಿಕ ದೌರ್ಜನ್ಯದ ಪ್ರಕರಣ ಬಯಲಾಗಿರುವಾಗ, ತನಗೂ ವಯಸ್ಸು, ಆರೋಗ್ಯ ಕ್ಷೀಣಿಸುತ್ತಿರುವಾಗ, ಈಗಲೂ ಕುಗ್ಗದೆ, ಜಗ್ಗದೆ ರಾಜಕೀಯ ಶಕ್ತಿಯನ್ನು ಪ್ರದರ್ಶಿಸುವ ಧೈರ್ಯವನ್ನು ಮೆಚ್ಚಲೇಬೇಕಾಗುತ್ತದೆ.....

ಹಾಗೆಯೇ ದೇವೇಗೌಡರನ್ನು ಕರ್ನಾಟಕ ರಾಜಕೀಯದ ಆದರ್ಶ ಪುರುಷ ಎಂದು ಕರೆಯೋಣವೇ ಎಂದರೆ ಅದು ಸೂಕ್ತವಲ್ಲ, ಹಾಗೆಂದು ಅವರು ಅತ್ಯಂತ ಕೆಟ್ಟ ರಾಜಕಾರಣಿಯೇ ಅಂದರೆ ಅದೂ ಸೂಕ್ತವಲ್ಲ. ರಾಜಕೀಯದ ಪಡಸಾಲೆಯಲ್ಲಿ ಉಪಯೋಗಿಸಬಹುದಾದ ಎಲ್ಲಾ ತಂತ್ರ ಕುತಂತ್ರ, ಒಳ್ಳೆಯ ಕೆಟ್ಟ ನಡೆಗಳನ್ನು ಅವರು ಮುನ್ನಡೆಸಿದ್ದಾರೆ. ಹಾಗೆಯೇ ಅತ್ಯಂತ ಆಳವಾದ ದೈವ ಭಕ್ತಿಯನ್ನು, ಮೂಢನಂಬಿಕೆಯನ್ನು ಹೊಂದಿದ್ದಾರೆ....

ಹಾಗೆಂದು ಎಲ್ಲರೂ ಭಾವಿಸುವಂತೆ ದೇವೇಗೌಡರಿಗೆ ಯಶಸ್ಸು ದೈವಿಕ ಶಕ್ತಿಯಿಂದಲೇ ಸಿಕ್ಕಿದೆ ಎಂದು ತಿಳಿಯುವುದಾದರೆ ಅದು ತಪ್ಪು. ಅವರು ಮೇಲ್ನೋಟಕ್ಕೆ ದೇವರನ್ನು ಪೂಜಿಸಿದರು, ದೇವರನ್ನು ಸಂಪೂರ್ಣ ನಂಬಿ ಸುಮ್ಮನೆ ಕೂರುವುದಿಲ್ಲ. ತಾವು ವಾಸ್ತವದಲ್ಲಿ, ಪ್ರಾಯೋಗಿಕವಾಗಿ ಶ್ರಮದ ಮೇಲೆಯೇ, ತಂತ್ರದ ಮೇಲೆಯೇ ನಂಬಿಕೆ ಇಟ್ಟಿದ್ದಾರೆ. ಆ ವಿಷಯದಲ್ಲಿ ದೇವರನ್ನು ಸಹ ನಂಬುವುದಿಲ್ಲ. ಫಲ ನೀಡಲಿ ಎಂದು ಪೂಜೆ ಮಾಡಿ ಸುಮ್ಮನೆ ಕೂರುವುದಿಲ್ಲ. ರಾಜಕೀಯ ಮೈದಾನದಲ್ಲಿ ತಮ್ಮ ಅನುಭವದ ಕಾಯಿಗಳನ್ನು ಮುನ್ನಡೆಸುತ್ತಲೇ ಇರುತ್ತಾರೆ. ಅದಕ್ಕೆ ದೈವ ಭಕ್ತಿಯ ಒಂದು ಸ್ಪೂರ್ತಿ ಪಡೆಯುತ್ತಾರೆ ಅಷ್ಟೇ.....

ಏಕೆಂದರೆ ಅನೇಕರು ದೈವವೇ ಎಲ್ಲಾ ಮಾಡಲಿ ಎಂದು ಪೂಜೆಗಳನ್ನು ಮಾಡಿ ಸುಮ್ಮನೆ ಕೂರುತ್ತಾರೆ. ದೇವೇಗೌಡ, ಯಡಿಯೂರಪ್ಪ, ಡಿಕೆ ಶಿವಕುಮಾರ್ ಇವರುಗಳಿಗೆ ದೇವರ ಮೇಲೆ ಸಹ ಸಂಪೂರ್ಣ ಭರವಸೆ ಇಲ್ಲ. ನಾಳೆ ದೇವರನ್ನು ನಂಬಿ ಸೋತರೆ ಕಷ್ಟ ಎಂದು ಎಲ್ಲಾ ರೀತಿಯ ಜಾತಿ, ಹಣ, ಭ್ರಷ್ಟಾಚಾರ ಎಲ್ಲವನ್ನೂ ಚುನಾವಣೆ ಸಂದರ್ಭದಲ್ಲಿ ಅಥವಾ ರಾಜಕೀಯದ ವಿಷಯದಲ್ಲಿ ಮಾಡಿಯೇ ಮಾಡುತ್ತಾರೆ. ದೇವರಿದ್ದಾನೆ ಆ ಕಾರಣದಿಂದ ಒಳ್ಳೆಯ ಕೆಲಸಗಳನ್ನು ಮಾಡೋಣ, ದೇವರು ನೋಡಿಕೊಳ್ಳಲಿ ಎಂದು ಆತನನ್ನು ನಂಬುವುದಿಲ್ಲ. ಇದೊಂದು ತರಹದ ವಿಚಿತ್ರ ಮನೋಭಾವದ ವಿಕ್ಷಿಪ್ತ ಜೀವಿಗಳಿವರು.....

ಒಟ್ಟಿನಲ್ಲಿ ವಿಮರ್ಶಿಸುತ್ತಾ ಹೋದರೆ ದೇವೇಗೌಡರು ಒಂದು ಸ್ಪಷ್ಟ ವಿಚಾರಗಳಿಗೆ ನಿಲುಕುವುದಿಲ್ಲ. ಒಬ್ಬ ಯಶಸ್ವಿ ರಾಜಕಾರಣಿ ಎಂಬಲ್ಲಿಗೆ ಅವರ ವ್ಯಕ್ತಿತ್ವ ಬಂದು ನಿಲ್ಲುತ್ತದೆ. ಕರ್ನಾಟಕದಲ್ಲಿ ಒಂದು ಪ್ರಾದೇಶಿಕ ಪಕ್ಷವನ್ನು ಇನ್ನೂ ಜೀವಂತ ಉಳಿಸಿದ್ದಾರೆ. ಅದಕ್ಕೆ ಅವರು ಅಭಿನಂದನಾರ್ಹರು. ಹಾಗೆಯೇ ಜಾತಿ ಮತ್ತು ಕುಟುಂಬ ರಾಜಕೀಯದ ಅತ್ಯಂತ ಕೆಟ್ಟ ರಾಜಕಾರಣದ ಉದಾಹರಣೆಯಾಗಿಯೂ ಅವರನ್ನು ಹೆಸರಿಸಬಹುದು......

**ಅವರಿಗೆ ಜನುಮದಿನ ಶುಭಾಶಯಗಳು...**

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,
ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T